ವಿಜಯಪುರ | ಸಂಪುಟ 04 | ಸಂಚಿಕೆ 043 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಶುಕ್ರವಾರ, ಏಪ್ರಿಲ್, 03, 2026

"ಧ್ವಜ ದಿನಾಚರಣೆ ಸಂದರ್ಭದಲ್ಲಿ ಪೊಲೀಸ್ ಧ್ವಜಗಳ ಮಾರಾಟದಿಂದ ಸಂಗ್ರಹವಾದ ವಂತಿಗೆಯನ್ನು ನಿವೃತ್ತ ಮತ್ತು ಸೇವಾ ನಿರತ ಪೊಲೀಸರ ಕ್ಷೇಮಾಭಿವೃದ್ಧಿಗೆ



ಉಪಯೋಗಿಸಿಕೊಳ್ಳಲಾಗುತ್ತದೆ."

■ ಲಕ್ಷ್ಮಣ ನಿಂಬರಗಿ

ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

# ಸಮಾಜದ ಶಾಂತಿ, ಸುವ್ಯವಸ್ಥೆಗೆ ಶ್ರಮಿಸುವ ಪೊಲೀಸರ ಕಾರ್ಯ ಅನನ್ಯ

## ವಿಜಯಪುರದಲ್ಲಿ ನಡೆದ ಜಿಲ್ಲಾ ಪೊಲೀಸ್ ಕಲ್ಯಾಣ ಹಾಗೂ ಧ್ವಜ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ. ಶ್ಲಾಘನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವರ್ಷದುದ್ದಕ್ಕೂ ಸದಾ ಒತ್ತಡದ ಮಧ್ಯೆಯೇ ಕಾರ್ಯನಿರ್ವಹಿಸುವ ಮೂಲಕ ಸಾರ್ವಜನಿಕರ ನೆಮ್ಮದಿಯ ಜೀವನಕ್ಕಾಗಿ, ಅಪರಾಧ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪೊಲೀಸರು ನಿಭಾಯಿಸುವ ಕರ್ತವ್ಯಕ್ಕೆ ಬೆಲೆ ಕಟ್ಟಲಾಗದು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಪೊಲೀಸರ ಕಾರ್ಯವನ್ನು ಬಣ್ಣಿಸಿದರು.

ಜಿಲ್ಲಾ ಪೊಲೀಸ್ ಇಲಾಖೆಯಿಂದ ಇಲ್ಲಿನ ಪೊಲಿಸ್ ಕವಾಯತು ಮೈದಾನದಲ್ಲಿ ಗುರುವಾರ ಬೆಳಿಗ್ಗೆ ಹಮ್ಮಿಕೊಂಡಿದ್ದ ಪೊಲೀಸ್ ಕಲ್ಯಾಣ ಹಾಗೂ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಸದಾ ಸಮಾಜದ ಒಳಿತಿಗಾಗಿ ಯಾವ ಪ್ರತಿಫಲಾಪೇಕ್ಷೆಯಿಲ್ಲದೇ ಹಗಲಿರುಳು ಶ್ರಮಿಸುವ ಪೊಲೀಸರು ಕಾರ್ಯ ಜನಮೆಚ್ಚುಗೆಗೆ ಪಾತ್ರವಾಗಿದೆ ಎಂದರು.

ಜಿಲ್ಲೆಯ ಪೊಲೀಸರ ಕಾರ್ಯದಕ್ಷತೆಗೆ ಹೆಸರುವಾಸಿಯಾಗಿದ್ದಾರೆ. ಇದಕ್ಕೆ ತಾಜಾ ನಿದರ್ಶನವೇ ಇತ್ತೀಚೆಗಷ್ಟೇ ಜಿಲ್ಲೆಯ ಐವರು ಪೊಲೀಸ್ ಅಧಿಕಾರಿ, ಸಿಬ್ಬಂದಿ ಮುಖ್ಯಮಂತ್ರಿಗಳ ಪದಕಕ್ಕೆ ಭಾಜನವಾಗಿದ್ದು, ಹೆಮ್ಮೆ ತರುವುದರ ಜೊತೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರ ದಕ್ಷ ಕಾರ್ಯವೈಖರಿಗೆ ಸಾಕ್ಷಿಯಾಗಿದೆ ಎಂದರು.

ಪೊಲೀಸ್ ಇಲಾಖೆ ಸಿಬ್ಬಂದಿ ಹಗಲಿರುಳು ಸಾರ್ವಜನಿಕರು ಶಾಂತಿ-ನೆಮ್ಮದಿಗಾಗಿ ತಮ್ಮ ಕರ್ತವ್ಯ ಮೀಸಲಿಡುತ್ತಾರೆ. ಜೊತೆಗೆ ಕಾನೂನು ಸುವ್ಯವಸ್ಥೆ ಕಾಪಾಡುವ, ಪ್ರಕೃತಿ ವಿಕೋಪದಂತಹ ಘಟನೆಗಳಲು ಘಟಿಸಿದಾಗ, ಅಪರಾಧ ಪ್ರಕರಣ ನಡೆಯದಂತೆ ತಡೆಗಟ್ಟುತ್ತಾರೆ. ಮಾತ್ರವಲ್ಲ ತುರ್ತು ಸಂದರ್ಭಗಳಲ್ಲಿ ಜೀವದ ಹಂಗು ತೊರೆದು ಸಾರ್ವಜನಿಕರ ನೆಮ್ಮದಿಗೋಸ್ಕರ ಮಿಡಿಯುವ ಪೊಲೀಸರ ಕಾರ್ಯ ಅದು ಕಾರ್ಯವಲ್ಲ. ಬದಲಿಗೆ ಅದು ಸಾರ್ವಜನಿಕರ ವಿಶ್ವಾಸ ಹಾಗೂ ನೆಮ್ಮದಿಯ ಜೀವನದ ಆಶಾಭಾವ ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಈ ದಿನದಂದು ಹೆಚ್ಚು ಶ್ರದ್ಧಾಪೂರ್ವಕವಾಗಿ, ರಚನಾತ್ಮಕವಾಗಿ ಮತ್ತು ನಿಷ್ಠೆಯೊಂದಿಗೆ ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಳ್ಳಲಾಗುತ್ತಿದೆ. ಸೇವೆಯಲ್ಲಿರುವ ಪೊಲೀಸ್ ಸಿಬ್ಬಂದಿ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ ನಮ್ಮ ಸಂಕಲ್ಪವನ್ನು ಮತ್ತಷ್ಟು ದೃಢಪಡಿಸಿಕೊಳ್ಳುವುದಾಗಿದೆ ಎಂದರು.

ನಿವೃತ್ತ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಸ್. ಕೆ.ಮಾರಿಹಾಳ ಅವರು ಧ್ವಜವಂದನೆ ಸ್ವೀಕರಿಸಿ ಮಾತನಾಡಿ, ಇತಿಹಾಸ ತ್ಯಾಗ, ಶೌರ್ಯ, ಅಚಲ ನಿಷ್ಠೆಯ ಪ್ರತಿಬಿಂಬವಾಗಿದೆ.

ಧ್ವಜದಡಿ ಸೇವೆ ಮಾಡಿರುವ ಪ್ರತಿ ಹೃದಯದಲ್ಲಿ ದೇಶ ಭಕ್ತಿ,ಕರ್ತವ್ಯ ನಿಷ್ಠೆ ಮತ್ತು ಸೇವಾ ಮನೋಭಾವ ಹೊಂದಿರುತ್ತಾರೆ. ಪೊಲೀಸ್ ಧ್ವಜವೂ ಚಿಹ್ನೆಯಲ್ಲ. ಅದೊಂದು ಮಹತ್ವದ್ದು ಎಂದು ಪೊಲೀಸರ ಕರ್ತವ್ಯವನ್ನು ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಟಿ.ಮಲ್ಲೇಶ, ಐಆರ್‌ಬಿ ಡೆಪ್ಯೂಟಿ ಕಮಾಂಡೆಂಟ್ ರಾಚಪ್ಪ ಕಾಜಗಾರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮನಗೌಡ ಹಟ್ಟಿ, ಡಿವೈಎಸ್ಪಿ ನಾಗರಾಜ ಡಿ. ಸೇರಿದಂತೆ ಜಿಲ್ಲೆಯ ಪೊಲೀಸ್ ಅಧಿಕಾರಿಗಳು, ನಿವೃತ್ತ ಅಧಿಕಾರಿ,ಸಿಬ್ಬಂದಿ ಸಾರ್ವಜನಿಕರು ಭಾಗವಹಿಸಿದ್ದರು.

ನಿವೃತ್ತ ಶಿಕ್ಷಕ ಎಚ್.ಎ.ಮಮದಾಪುರ ಹಾಗೂ ದಶರಥ ಕಾರ್ಯಕ್ರಮ ನಿರೂಪಿಸಿದರು.





ಧ್ವಜ ದಿನಾಚರಣೆ ಸಂದರ್ಭದಲ್ಲಿ ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ, ಧ್ವಜಗಳ ಮಾರಾಟದಿಂದ ಸಂಗ್ರಹವಾದ ವಂತಿಗೆಯನ್ನು ನಿವೃತ್ತ ಮತ್ತು ಸೇವಾ ನಿರತ ಪೊಲೀಸರ ಕ್ಷೇಮಾಭಿವೃದ್ಧಿಗೆ ಉಪಯೋಗಿಸಿಕೊಳ್ಳಲಾಗುತ್ತದೆ. ಜಿಲ್ಲೆಯಲ್ಲಿ ಈಗಾಗಲೇ ಪೊಲೀಸರ ಸಲುವಾಗಿ ಹಲವಾರು ವಿವಿಧ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪೊಲೀಸ್ ಸಮುದಾಯ ಭವನ, ಪೊಲೀಸರ ವಸತಿ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಡಿಆರ್ ಘಟಕದಲ್ಲಿ ಅತಿಥಿ ಗೃಹವೂ ಇದೆ. ಪೊಲೀಸ್ ಕಲ್ಯಾಣ ನಿಧಿಯಿಂದ ಪೊಲೀಸ್ ಸಿಬ್ಬಂದಿ ಮಕ್ಕಳಿಗೆ ಶೈಕ್ಷಣಿಕ ಧನ ಸಹಾಯ, ವೈದ್ಯಕೀಯ ಸಹಾಯ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಲಾಗಿದೆ. ಶೇ.50ರಷ್ಟು ಅನುದಾನವನ್ನು ನಿವೃತ್ತ ಅಧಿಕಾರಿಗಳ ಪೊಲೀಸ್ ಕಲ್ಯಾಣ ನಿಧಿಗೆ ಶೇ.50 ರಷ್ಟನ್ನು ಕೇಂದ್ರ ಪೊಲೀಸ್ ಕಲ್ಯಾಣ ನಿಧಿಗೆ ಜಮೆ ಮಾಡಲಾಗುತ್ತದೆ."

■ ಲಕ್ಷ್ಮಣ ನಿಂಬರಗಿ

ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

### ಆಕರ್ಷಕ ಪಥಸಂಚಲನ



ಪರೇಡ್ ಕಮಾಂಡರ್ ಐ.ಎಸ್. ತೇಲಿ ಅವರ ನೇತೃತ್ವದಲ್ಲಿ ಆರ್.ಎಸ್.ಐ ಮಲ್ಲನಗೌಡ ಗುತ್ತರಗಿ, ಆದರ್ಶ ನಗರ ಪೊಲೀಸ್ ಠಾಣೆಯ ಪಿಎಸ್‌ಐ ಸೀತಾರಾಮ ಲಮಾಣಿ, ಮನಗೂಳಿ ಪೋಲೀಸ್ ಠಾಣೆಯ ವಿಜಯಕುಮಾರ ರಾಠೋಡ, ಗೋಲಗುಂಬಜ್ ಪಿಎಸ್‌ಐ ಎಂ.ಡಿ.ಗೋರಿ, ಸಿಂದಗಿ ಪಿಎಸ್ ಐ ಮಲಕನಗೌಡ ಬಿರಾದಾರ, ಕೂಡಗಿ ಪೊಲೀಸ್ ಠಾಣೆಯ ಪಿಎಸ್‌ಐ ಯತೀಶ ಕೆ.ಎನ್, ಗಾಂಧಿವೃತ್ತ ಠಾಣೆ ಪಿಎಸ್ ಐ ಸುಷ್ಮಾ ನಂದಗೋಳ ಒಳಗೊಂಡ ತಂಡಗಳು ಆಕರ್ಷಕ ಪಥ ಸಂಚಲನ ನಡೆಸಿಕೊಟ್ಟರು.

ಅರ್ಜುನ ಭಜಂತ್ರಿ ಹಾಗೂ ಸುರೇಶ ಉತ್ಲಾಸಕರ ನೇತೃತ್ವದ ತಂಡ ಕದಮ್, ಸುಶ್ರಾವ್ಯ ಸಂಗೀತದ ನಿನಾದ ಬ್ಯಾಂಡ್ ಮೂಲಕ ನುಡಿಸಿದರು.

### ಪೊಲೀಸರ ಕಾರ್ಯ ಅತ್ಯಂತ ಕಠಿಣ ಕೆಲಸ



"ವಿಜಯಪುರ ಜಿಲ್ಲೆಯ ಕಾನೂನು ಸುವ್ಯವಸ್ಥೆ ಗಟ್ಟಿಗೊಳಿಸುವಲ್ಲಿ ಪೊಲೀಸರ ಕಾರ್ಯ ಅಪ್ರತಿಮವಾಗಿದೆ. ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಸುರಕ್ಷತೆ ಕಾಪಾಡಿ ಸಮಾಜದಲ್ಲಿ ನೆಮ್ಮದಿಯ ಜೀವನಕ್ಕೆ ಕಾರಣವಾಗಿದೆ. ಪೊಲೀಸರ ಕಾರ್ಯ ಸರಳವಲ್ಲ, ಅದೊಂದು ಅತ್ಯಂತ ಕಠಿಣ ಕೆಲಸ. ಯಾವುದೇ ಅಪರಾಧ ತಡೆಗೆ ತುರ್ತು ಸ್ಪಂದನೆ ಪೊಲೀಸರದ್ದಾಗಿದೆ. ಪೊಲೀಸ್ ಇಲಾಖೆಗೆ ಜಿಪಂ ಸಹಕಾರ ನೀಡಲಿದೆ."

■ ರಿಷಿ ಆನಂದ

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ

# ಪಾರದರ್ಶಕ ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಆದ್ಯತೆ: ಜಿಪಂ ಸಿಇಒ ರಿಷಿ ಆನಂದ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಾದ್ಯಂತ ನಡೆಯುತ್ತಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಸುಸೂತ್ರ ಹಾಗೂ ಪಾರದರ್ಶಕ ನಿರ್ವಹಣೆಗೆ ಒತ್ತು ನೀಡುವ ನಿಟ್ಟಿನಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರು ಇಂದು ನಗರದ ಸೆಂಟ್ ಜೋಸೆಫ್ ಪ್ರೌಢಶಾಲೆ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಪರೀಕ್ಷಾ ಕೊಠಡಿಗಳಲ್ಲಿ ಮೇಲ್ವಿಚಾರಕರು ಕಟ್ಟುನಿಟ್ಟಾಗಿ ನಿಯಮ ಪಾಲಿಸುತ್ತಿರುವುದನ್ನು ವೀಕ್ಷಿಸಿದರು. ಪರೀಕ್ಷಾ ಪ್ರಕ್ರಿಯೆಯ ಪಾರದರ್ಶಕತೆಗೆ ಮಹತ್ವ ನೀಡಿ, ಕೇಂದ್ರದಲ್ಲಿ ಅಳವಡಿಸಲಾದ ಸಿಸಿಟಿವಿ ಕ್ಯಾಮರಾಗಳು, ಡಿಜಿಟಲ್ ನಿಗಾ ವ್ಯವಸ್ಥೆಗಳು ಹಾಗೂ ಅವುಗಳ ನಿರಂತರ ಕಾರ್ಯನಿರ್ವಹಣೆಯನ್ನು ಸಿಇಒ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಾಲೆಯ ಮುಖ್ಯೋಪಾಧ್ಯಾಯರು, ಪರೀಕ್ಷಾ ಅಧೀಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತ-ರಿದ್ದರು.

# ಡಿಜಿಟಲ್ ಜನಗಣತಿಗೆ ಚಾಲನೆ: ಸ್ವಯಂ ವಿವರ ದಾಖಲಿಸಲು ಡಿಸಿ ಸಲಹೆ

## ಜನಗಣತಿ ಕಾರ್ಯ ಯಶಸ್ವಿಗೊಳಿಸಲು ಸಾರ್ವಜನಿಕರಿಗೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಮನವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಾದ್ಯಂತ ಏ. 1ರಿಂದ ರಾಷ್ಟ್ರೀಯ ಜನಗಣತಿಯ ಮೊದಲ ಹಂತದ ಸ್ವಯಂ ಜನಗಣತಿ ಕಾರ್ಯಾರಂಭವಾಗಿದ್ದು, ಏ. 15 ರೊಳಗಾಗಿ ಪ್ರತಿಯೊಬ್ಬರೂ ತಮ್ಮ ಕುಟುಂಬದವರ ಸ್ವಯಂ ಗಣತಿಗೊಳಪಡಿಸುವ ಮೂಲಕ ಜನಗಣತಿ ಕಾರ್ಯ ಯಶಸ್ವಿಗೆ ಕೈ ಜೋಡಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಸಾರ್ವಜನಿಕರಿಗೆ ಮನವಿ ಮಾಡಿದರು.

ರಾಷ್ಟ್ರೀಯ ಜನಗಣತಿ 2027 ರ ಮೊದಲ ಹಂತದ ಸ್ವಯಂ ಗಣತಿ ಕುರಿತು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಅವರು ಮಾತನಾಡಿದರು.

ಸ್ವಯಂ ಗಣತಿ ಅತ್ಯಂತ ಸರಳವಾಗಿದ್ದು, ಕೇವಲ ಐದು ನಿಮಿಷದಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಬಹುದಾಗಿದೆ. ಈಗಾಗಲೇ ನಾನು ಆ ಕಾರ್ಯ ಪೂರ್ಣಗೊಳಿಸಿದ್ದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ದೇಶದ ಮಹತ್ವಾಕಾಂಕ್ಷಿಯ ಜನಗಣತಿ ಪ್ರಕ್ರಿಯೆ ಏ.1ರಿಂದ ಆರಂಭಗೊಂಡಿದ್ದು, ಜನಗಣತಿ ದೇಶದ ಅಭಿವೃದ್ಧಿಗೆ ಪೂರಕವಾದ ಪ್ರಮುಖ ಕಾರ್ಯವಾಗಿದೆ. ಈ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ನಿಖರ ಮಾಹಿತಿ ನೀಡುವ ಮೂಲಕ ಸಹಕರಿಸಿಬೇಕು. ಏ.15ರವರೆಗೆ ಸ್ವಯಂ ವಿವರ ದಾಖಲಿಸಲು ಅವಕಾಶವಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ಇಂಡಿ, ವಿಜಯಪುರ ಉಪವಿಭಾಗಾಧಿಕಾರಿಗಳು, ಎಲ್ಲ ತಾಲೂಕಿನ ತಹಸೀಲ್ದಾರ್ ರು, ಬಿಇಒ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

### ಸಾರ್ವಜನಿಕರು ಮಾಡಬೇಕಾದುದು ಇಷ್ಟೇ

ಜನಗಣತಿಯ ವೆಬ್ ಪೋರ್ಟಲ್: https://se.census.gov.in ಗೆ ಮೊಬೈಲ್ ಸಂಖ್ಯೆ ಮತ್ತು ಒಟಿಪಿ ಬಳಸಿ ಲಾಗಿನ್ ಆಗಿ, ಬಳಿಕ ನಿಮ್ಮ ಸ್ಥಳ ಆಯ್ಕೆ ಮಾಡಿ, ನಕ್ಷೆಯಲ್ಲಿ ನಿಮ್ಮ ಮನೆ ಗುರುತಿಸಿ, ಬಳಿಕ ಮನೆಯ ಇಲ್ಲವೇ ಕುಟುಂಬದ ವಿವರ ಭರ್ತಿ ಮಾಡಿ, ನಿಮ್ಮ SE Reference ID ಪಡೆಯಿರಿ. ಈಗ ಬಂದಿರುವ ನಿಮ್ಮ ಎಸ್ ಇ ಐಡಿ ಅನ್ನು ಸುರಕ್ಷಿತವಾಗಿ ಇಟ್ಟು, ಗಣತಿದಾರರು ಮನೆಗೆ ಬಂದಾಗ ಅದನ್ನು ಅವರೊಂದಿಗೆ ಹಂಚಿಕೊಂಡರೆ ನೀವು ಜನಗಣತಿ ಕಾರ್ಯಕ್ಕೆ ಕೈಜೋಡಿಸಿದಂತಾಗುವುದು ಎಂದು ಜಿಲ್ಲಾಧಿಕಾರಿ ಡಾ.ಆನಂದ್ ಕೆ. ವಿವರಿಸಿದರು.

### ಏ.16 ರಿಂದ ಮೇ 15 ವರೆಗೆ ಕ್ಷೇತ್ರ ಪರಿಶೀಲನೆ



ಏ. 16 ರಿಂದ ಮೇ 15 ರವರೆಗಿನ ಅವಧಿಯಲ್ಲಿ ಗಣತಿದಾರರು ಮನೆಗೆ ಭೇಟಿ ನೀಡಿ ವಿವರಗಳನ್ನು ಪರಿಶೀಲಿಸುತ್ತಾರೆ.

ಒಂದು ವೇಳೆ ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಅವರು ನಿಮ್ಮಿಂದಲೇ ಮಾಹಿತಿಯನ್ನು ಸಂಗ್ರಹಿಸುತ್ತಾರೆ. ಈ ಅವಧಿಯಲ್ಲಿ ಶೇ.100ರಷ್ಟು ಗೌಪ್ಯತೆ ಇಟ್ಟು ನಿಮ್ಮ ಸ್ವಯಂ ಗಣತಿಯನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯ ಜನತೆ ಇದರ ಸದುಪಯೋಗ ಪಡೆದುಕೊಂಡು ಜನಗಣತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಹೇಳಿದರು.

### ಪೊಲೀಸ್ ಸಿಬ್ಬಂದಿ ಸ್ವಯಂ ಗಣತಿ ಮಾಡಿಸಿಕೊಳ್ಳಿ : ಎಸ್ಪಿ



ಜಿಲ್ಲೆಯ ಪ್ರತಿ ಪೊಲೀಸ್ ಠಾಣೆ ಸಿಬ್ಬಂದಿಯನ್ನು ಸ್ವಯಂ ಗಣತಿ ಮಾಡಿಸಿಕೊಳ್ಳಲು ಸೂಚಿಸುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಜಿಲ್ಲಾಧಿಕಾರಿಗಳಿಗೆ ವಿವರಿಸಿದರು.

# ಗ್ರಾಹಕರ ಜೇಬಿಗೆ ಹೊರೆಯಾದ ನಿಂಬೆಹಣ್ಣಿನ ದರ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ

ಜಮಖಂಡಿ: ಸಾಮಾನ್ಯವಾಗಿ ಬೇಸಿಗೆಯಲ್ಲಿ ಏರಿಕೆಯಾಗುವ ನಿಂಬೆಹಣ್ಣಿನ ದರ ಈ ಬಾರಿ ಕೂಡಾ ದೊಡ್ಡ ಪ್ರಮಾಣದಲ್ಲಿ ಹೆಚ್ಚಾಗುತ್ತಿದೆ. ಬಿಸಿಲು ಬೇಗೆಯ ನಡುವೆ ನಿತ್ಯ ಬಳಸುವ ನಿಂಬೆ ದರವೂ ಗ್ರಾಹಕರಿಗೆ ಬಿಸಿಯೇರಿಸಿದೆ.

ಪಟ್ಟಣದ ಮಾರುಕಟ್ಟೆಯಲ್ಲಿ ನಿಂಬೆಹಣ್ಣು ಕಂಡಿತೆಂದು ಖರೀದಿಗೆ ತೆರಳಿದರೆ ದರ ಬಲು ದುಬಾರಿಯಾಗಿದೆ. ನಿಂಬೆವೊಂದಕ್ಕೆ ಸುಮಾರು 7ರಿಂದ 8 ರೂ.ವರೆಗೆ ಮಾರಾಟ ಮಾಡಲಾಗುತ್ತಿದೆ. ಸಣ್ಣ ಗಾತ್ರದ ನಿಂಬೆ ಹಣ್ಣು ಮಾತ್ರ ಕಡಿಮೆ ದರಕ್ಕೆ ಲಭ್ಯವಿದೆ.

**ನಿಂಬೆ ಹಣ್ಣು ಸಿಗುವುದು ಕಷ್ಟ**

ಬಿಸಿಲ ಬೇಗೆಯ ನಡುವೆ ಗ್ರಾಹಕರಿಗೆ ಬಿಸಿಯೇರಿಸಿದೆ ನಿತ್ಯ ಬಳಸುವ ನಿಂಬುವಿನ ದರ ಸದ್ಯ ಗರಿಷ್ಠ ದರಲ್ಲಿ ಮಾರಾಟ ಮಾಡಲಾಗುತ್ತಿದೆ. ಉತ್ತಮ ಗುಣಮಟ್ಟದ ನಿಂಬೆ ಹಣ್ಣು ಸಿಗುವುದು ಕಡಿಮೆಯಾಗಿದೆ. ಇದರಿಂದ ಅಗತ್ಯದಷ್ಟು ಕೊಳ್ಳಲೂ ಆಗದೇ ಬಿಡಲೂ ಆಗದೇ ಗ್ರಾಹಕರು ಪರಿತಪಿಸುವಂತಾಗಿದೆ.

**ನಿಂಬೆಹಣ್ಣಿನ ದರ ಜೇಬಿಗೆ ಕುತ್ತು**

ಆರೋಗ್ಯಕ್ಕೆ ಹಿತಕಾರಿಯಾದ ನಿಂಬೆಯನ್ನು ಆಹಾರ ಪದಾರ್ಥಗಳಲ್ಲಿಅಗತ್ಯವಾಗಿ ಬಳಕೆ ಮಾಡಲಾಗುತ್ತದೆ. ಊಟಕ್ಕೆ ಉಪ್ಪಿನ ಕಾಯಿ ಇಲ್ಲದಿದ್ದರೆ ಹೇಗೆ ಸಪ್ಪೆಯೋ ಹಾಗೇ ಕೆಲವು ಅಡುಗೆ ಪದಾರ್ಥ ತಯಾರಿಯಲ್ಲಿ ನಿಂಬೆ ಇರುವಿಕೆ ಬಹಳ ಮುಖ್ಯ. ಅದರಲ್ಲೂಈ ಬೇಸಿಗೆಯಲ್ಲಿ ಜ್ಯೂಸ್ ಮಾಡಿಕೊಳ್ಳಲು ಇದು ಇರಲೇಬೇಕು. ಅದಕ್ಕಿಂತ ಹೆಚ್ಚಾಗಿ ಉಪ್ಪಿನಕಾಯಿಗೆ ನಿಂಬೆಯನ್ನು ಹೆಚ್ಚಾಗಿ ಬಳಸಲಾಗುತ್ತದೆ. ಆದರೆ, ಈ ಹಣ್ಣಿನ ದರ ಜೇಬಿಗೆ ಕುತ್ತು ತಂದಿಟ್ಟಿದೆ. ಒಳ್ಳೆಯ ಗುಣಮಟ್ಟದ ನಿಂಬೆಯೊಂದಕ್ಕೆ 8 ರೂ.ಗಿಂತ ಹೆಚ್ಚು ಬೆಲೆಯಿಂದೆ. ಸಣ್ಣಸಣ್ಣ ನಿಂಬೆ ಕೊಂಡೊಯ್ದರೆ ಅದರಲ್ಲಿ ರಸವೇ ಇರುವುದಿಲ್ಲ ಎನ್ನುತ್ತಾರೆ ಜ್ಯೂಸ್ ವ್ಯಾಪಾರಿ ಕಾಶೀನಾಥ ಜನಗೌಡ.

**ಈ ಬಾರಿ ಇಳುವರಿ ಕಡಿಮೆ**

ಗ್ರಾಮಗಳ ತೊಟಗಳ ಬದುವು, ತಗ್ಗು ಪ್ರದೇಶದಲ್ಲಿ ಮನೆಯಂಗಳದಲ್ಲಿ ಹೆಚ್ಚಾಗಿ ನಿಂಬೆ ಗಿಡಗಳಿರುತ್ತವೆ. ಮನೆ ಖರ್ಚಿಗೆ ಸಾಕಾಗುವಷ್ಟು ನಿಂಬೆ ಹಣ್ಣು ಈ ಗಿಡಗಳಲ್ಲೆ ಸಿಗುತ್ತವೆ. ಆದರೆ, ಈ ಬಾರಿ ಮಳೆಗಾಲದಲ್ಲಿ ಅತಿಯಾದ ಮಳೆಯಿಂದಾಗಿ ಇದರ ಇಳುವರಿ ಮೇಲೆ ಹೊಡೆತ ಬಿದ್ದಿದೆ. ಗಿಡಗಳಲ್ಲಿ ನಿಂಬೆ ಪ್ರಮಾಣ ತೀರಾ ಕಡಿಮೆಯಾಗಿದೆ. ಅದರಲ್ಲೂ ಬೇಸಿಗೆಯ ಅಬ್ಬರಕ್ಕೆ ಗಿಡಗಳನ್ನು ಬದುಕಿಸಿಡುವುದೇ ಸವಾಲಾಗಿದೆ.

"ರಾಜ್ಯದಲ್ಲಿ ಹೆಚ್ಚಾಗಿ ನಿಂಬೆ ಪೂರೈಸುವ ನಮ್ಮ ವಿಜಯಪುರ ಜಿಲ್ಲೆಯಲ್ಲಿ ನಿಂಬೆ ಇಳುವರಿ ಕುಸಿತವಾಗಿರುವುದು ದರ ಹೆಚ್ಚಲು ಕಾರಣವಾಗಿದೆ. ಚಳಿಗಾಲದಲ್ಲಿ 10-12 ಚೀಲ ಸಿಗುವಲ್ಲಿ ಈಗ 2 ಚೀಲ ಅವರು ಹೇಳಿದ ದರಕ್ಕೆ ಸಿಗುತ್ತಿದೆ. ಇನ್ನು ಆಂಧ್ರದಿಂದ ಬರುತ್ತಿದ್ದರೂ ಅದು ಇನ್ನೂ ಸರಿಯಾಗಿ ಬರುತಿಲ್ಲ. ಅದು ಸರಿಯಾಗಿ ಮಾರುಕಟ್ಟೆಗೆ ಬರಲು ಶುರುವಾದಾಗ ಬೆಲೆ ಇಳಿಯಬಹುದು."

■ ಮಲ್ಲು ನಾವಿ

ಹೊಕುಂಡಿ ಗ್ರಾಮದ ನಿಂಬೆ ಬೆಳೆಗಾರ.

"ಈಗ ಮಾರುಕಟ್ಟೆಯಲ್ಲಿ ಮಧ್ಯಮ ಗಾತ್ರದ ಒಂದು ನಿಂಬೆ ಹಣ್ಣು 5 ರೂ.ದಿಂದ 6 ರೂ.ಗೆ ಮಾರಾಟವಾದರೆ, ದೊಡ್ಡ ಗಾತ್ರದ ನಿಂಬೆಹಣ್ಣಿನ ಬೆಲೆ 7 ರೂ.ದಿಂದ 10 ರೂ.ಇದೆ. ಮಾರುಕಟ್ಟೆಯ ಬೇಡಿಕೆಗೆ ಅನುಸಾರ ಬೆಳೆಗಾರರಿಂದ ನಿಂಬೆ ಸಿಗುತ್ತಿಲ್ಲ. ಕಳೆದ ವರ್ಷ ಇದ್ದ ದುಬಾರಿ ದರ ಮುಂದುವರಿದಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ಹೆಚ್ಚಾಗಬಹುದು."

■ ನಿಂಬೆಹಣ್ಣಿನ ವ್ಯಾಪಾರಿಗಳು

ಜಮಖಂಡಿ



# ಬೆಂಗಳೂರು – ವಿಜಯಪುರ ಎಕ್ಸ್‌ಪ್ರೆಸ್ ರೈಲಿಗೆ ಸಚಿವರ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



**ಹುಬ್ಬಳ್ಳಿ - ಗದಗ ಬೈಪಾಸ್ ಮೂಲಕ ರೈಲು ಓಡಿಸಲು ಕೋರಿಕೆ | ವೈಷ್ಣವ್, ಸೋಮಣ್ಣಗೆ ಸಚಿವ ಎಂ.ಬಿ.ಪಾಟೀಲ ಪತ್ರ**

ಬೆಂಗಳೂರು: ಆಲಮಟ್ಟಿ–ವಂದಾಲ ನಡುವಿನ 9.60 ಕಿ.ಮೀ. ಉದ್ದ ಜೋಡಿಹಳಿ ಕಾಮಗಾರಿ ಮುಗಿದು, ಮಾರ್ಚ್ 25ರಿಂದ ಸಂಚಾರಕ್ಕೆ ಮುಕ್ತವಾಗಿದೆ. ಆದ್ದರಿಂದ ಬೆಂಗಳೂರು–ವಿಜಯಪುರ ನಡುವೆ ಬಹುಕಾಲದ ಬೇಡಿಕೆಯಾಗಿರುವ ಎಕ್ಸ್‌ಪ್ರೆಸ್ ರೈಲು ಸೇವೆ ಆರಂಭಿಸಬೇಕು ಎಂದು ಕೋರಿ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಅವರು ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಮತ್ತು ವಿ.ಸೋಮಣ್ಣ ಇಬ್ಬರಿಗೂ ಪತ್ರ ಬರೆದಿದ್ದಾರೆ.

ಈ ಸಂಬಂಧವಾಗಿ ಅವರು ಮಾರ್ಚ್ 30ರಂದು ತಮ್ಮ ಪತ್ರ ರವಾನಿಸಿದ್ದಾರೆ.

ಇದರಲ್ಲಿ ಅವರು, ಗದಗ–ಹೊಟಗಿ ಹಳಿ ದ್ವಿಪಥೀಕರಣ ಯೋಜನೆಯ ಭಾಗವಾಗಿ ಆಲಮಟ್ಟಿ–ವಂದಾಲ ನಡುವಿನ ಕಾಮಗಾರಿ ಈಗ ಮುಗಿದಿದೆ. ಇದು ಮುಗಿದರೆ ಬೆಂಗಳೂರು–ವಿಜಯಪುರ ನಡುವೆ ಎಕ್ಸ್‌ಪ್ರೆಸ್ ರೈಲು ಆರಂಭಿಸಬಹುದು ಎಂದು ಹಿಂದಿನ ಭೇಟಿಯಲ್ಲಿ ಹೇಳಿದ್ದಿರಿ. ಈಗ ಇದಕ್ಕೆ ಆದ್ಯತೆ ಕೊಡಬೇಕು. ಶೈಕ್ಷಣಿಕ, ವೈದ್ಯಕೀಯ, ಆಡಳಿತಾತ್ಮಕ, ವಾಣಿಜ್ಯ ವಹಿವಾಟು ಇತ್ಯಾದಿಗಳಿಗೆ ನಿತ್ಯವೂ ಬೆಂಗಳೂರಿಗೆ ಬರುವ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಸಾವಿರಾರು ಜನರಿಗೆ ಅನುಕೂಲವಾಗಲಿದೆ ಎಂದು ಅವರು ಗಮನ ಸೆಳೆದಿದ್ದಾರೆ.

ಇದೇ ರೀತಿಯಲ್ಲಿ ಈಗ ಎರಡೂ ನಗರಗಳ ನಡುವೆ ರೈಲು ಪ್ರಯಾಣಕ್ಕೆ 15 ಗಂಟೆಗಳ ಕಾಲ ಹಿಡಿಯುತ್ತಿದೆ. ಇದು ಅನನುಕೂಲಕ್ಕೆ ಕಾರಣವಾಗಿದೆ. ಇದನ್ನು 10 ಗಂಟೆಗಳಿಗೆ ಇಳಿಸಬೇಕಾದ ಜರೂರಿದೆ. ಬೆಂಗಳೂರಿನಿಂದ ಹೊರಡುವ ರೈಲುಗಳಿಗೆ ಹುಬ್ಬಳ್ಳಿಯ ತನಕ ನಿಗದಿತ ನಿಲುಗಡೆ ನೀಡುವುದು ಮತ್ತು ನಂತರ ವಿಜಯಪುರಕ್ಕೆ ಸಾಗುವ ರೈಲುಗಳು ಹುಬ್ಬಳ್ಳಿ ಮತ್ತು ಗದಗ ಬೈಪಾಸ್ ಮಾರ್ಗಗಳಲ್ಲಿ ಸಂಚರಿಸಲು ವ್ಯವಸ್ಥೆ ಮಾಡಬೇಕು ಎಂದು ಅವರು ಕೋರಿದ್ದಾರೆ.

# ಸಾರ್ವಜನಿಕರ ಸಮಸ್ಯೆಗಳಿಗೆ ಅಧಿಕಾರಿಗಳು ತಕ್ಷಣ ಸ್ಪಂದಿಸಿ : ಡಾ. ನಾಗಲಕ್ಷ್ಮಿ

■ ಉದಯ ರಶ್ಮಿ ದಿನಪತ್ರಿಕೆ



ಅಥಣಿ: ಸಮಾಜದಲ್ಲಿ ಪುರುಷರು ತಮ್ಮ ಮನೆಯ ಹೆಣ್ಣುಮಕ್ಕಳಿಗೆ ನೀಡುವಷ್ಟೇ ಗೌರವವನ್ನು ಇತರ ಮಹಿಳೆಯರಿಗೂ ನೀಡಿದಾಗ ಮಾತ್ರ ಒಂದು ಸುಸಂಸ್ಕೃತ ಕುಟುಂಬ ಮತ್ತು ಸಮಾಜ ನಿರ್ಮಾಣ ಸಾಧ್ಯ, ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷ ಡಾ. ನಾಗಲಕ್ಷ್ಮಿ ಚೌಧರಿ ಪ್ರತಿಪಾದಿಸಿದರು.

ಪಟ್ಟಣದ 'ಭರವಸೆ ಬೆಳಕು ಫೌಂಡೇಶನ್' ವತಿಯಿಂದ ಆಯೋಜಿಸಲಾಗಿದ್ದ ಮಹಿಳಾ ದಿನಾಚರಣೆ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಮಾತನಾಡಿ ನಾನು ಕೂಡ ಅಂತರಜಾತಿ ವಿವಾಹವಾಗಿದ್ದು, ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದೇನೆ ನಾವೆಲ್ಲರೂ ಬಸವ ತತ್ವಗಳನ್ನು ಪಾಲಿಸಿದರೆ ಕರ್ನಾಟಕವು ವಿಶ್ವಕ್ಕೆ ಮಾದರಿಯಾಗಬಲ್ಲದು ಇಂದು ಮಹಿಳೆಯರು ಕಾನೂನು ಹೋರಾಟಗಳಲ್ಲಿ ತೊಡಗಿಸಿಕೊಳ್ಳಲು ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನವೆ ದೊಡ್ಡ ಶಕ್ತಿಯಾಗಿದೆ, ಎಂದರು.

ಇದೇ ಸಂದರ್ಭದಲ್ಲಿ ಮಹಿಳೆಯರ ಸಮಸ್ಯೆಗಳ ಕುರಿತು ಗಂಭೀರ ಚರ್ಚೆ ನಡೆಸಿದ ಅವರು, ಸ್ಥಳೀಯ ಮಹಿಳೆಯರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಸರ್ಕಾರಿ ವಿವಿಧ ಇಲಾಖೆಗಳಲ್ಲಿನ ಲೋಪದೋಷಗಳ ಬಗ್ಗೆ ಬಂದ ದೂರುಗಳಿಗೆ ಸಂಬಂಧಿಸಿದಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿ, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕೆಲಸ ಮಾಡಲು ಸೂಚಿಸಿದರು.

ಈ ವೇಳೆ ಭರವಸೆ ಬೆಳಕು ಫೌಂಡೇಶನ್ ಅಧ್ಯಕ್ಷರಾದ ರೂಪಾ ಕಾಂಬಳೆ, ತಾಲೂಕಾ ದಂಡಾಧಿಕಾರಿ ಸಿದರಾಯ ಭೋಸಗಿ, ತಾಲೂಕು ಪಂಚಾಯತ ಇ ಒ ಶಿವಾನಂದ ಕಲ್ಲಾಪುರ, ಪಿಎಸ್‌ಐ ಜಿ ಎಸ್ ಉಪ್ಪಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಮಂಜುನಾಥ ಸೌಂದಲಗೇಕರ ತಾಲೂಕು ವೈದ್ಯಾಧಿಕಾರಿ ಬಸಗೌಡ ಕಾಗೆ, ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿ ವೆಂಕಟೇಶ ಕುಲಕರ್ಣಿ,ಪುರಸಭೆ ಅಧ್ಯಕ್ಷೆ ಶಿವಲೀಲಾ ಬೂಟಾಳಿ,ಸವಿತಾ ಕಾಂಬಳೆ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ನುರಾರು ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು

# ನಿವೃತ್ತ ಶಿಕ್ಷಕ ರಾಜಶೇಖರಯ್ಯ ಗೆ ಸನ್ಮಾನ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಸಮೀಪದ ಕಾಖಂಡಕಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಳೆದ ಏಳು ವರ್ಷಗಳಿಂದ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಶಿಕ್ಷಕ ರಾಜಶೇಖರಯ್ಯ ಮಳಯ್ಯ ಮಠಪತಿ ಅವರಿಗೆ ಶಾಲಾ ಶಿಕ್ಷಕರು ಹಾಗೂ ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಬಂದೇನವಾಜ್ ಗುರಾತೆ, ರಾಮನಗೌಡ ಪಾಟೀಲ್, ಉಮೇಶ್ ಸೊನ್ನದ, ಶಾಲೆಯ ಮುಖ್ಯ ಗುರುಮಾತೆ ಲಲಿತಾ ಕೋರಿ ಹಾಗೂ ಸಿಆರ್‌ಪಿ ಬಸವರಾಜ್ ಜಿಲ್ಲಿ, ಎಸ್‌ಡಿಎಂಸಿ ಸದಸ್ಯರು ಮತ್ತು ಶಾಲೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಜಾತಿ–ಮತ–ಪಂಥಗಳ ಬೇಧವಿಲ್ಲದ ಹನುಮ ಜಯಂತಿ : ಕುಲಕರ್ಣಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಆಂಜನೇಯ ಸ್ವಾಮಿಯು ಮಹಾದೇವನ ಅವತಾರ, ಅಷ್ಟಸಿದ್ಧಿ ಮತ್ತು ನವ ನಿಧಿಯನ್ನು ಹೊಂದಿರುವವನು. ಶಾಶ್ವತವಾದ ಶಕ್ತಿ, ನಿಷ್ಠೆ ಮತ್ತು ಭಕ್ತಿಯನ್ನು ಹೊಂದುತ್ತಾ ಶ್ರೀ ರಾಮನನ್ನು ಒಲಿಸಿಕೊಂಡವನು. ನಾವೆಲ್ಲರೂ ಹನುಮ ಜಯಂತಿಯನ್ನು ಯಾವುದೇ ಜಾತಿ–ಮತ–ಪಂಥಗಳ ಬೇಧವಿಲ್ಲದೇ ಶ್ರದ್ಧೆ, ಭಕ್ತಿ–ಭಾವ ಮತ್ತು ಸಾಮರಸ್ಯತೆಯಿಂದ ಆಚರಿಸೋಣ ಎಂದು ಹಿರಿಯ ಹಿಂತಕ ದ್ರುವ ಕುಲಕರ್ಣಿ ಹೇಳಿದರು.

ನಗರದ ಅಥಣಿ ರಸ್ತೆಯಲ್ಲಿರುವ ಎನ್.ಜಿ.ಓ ಕಾಲನಿಯಲ್ಲಿ ಜೈ ಶ್ರೀ ಹನುಮಾನ ಮಂದಿರದಲ್ಲಿ ಆಯೋಜಿಸಿದ್ದ ಹನುಮ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಜೀವನ ನಿರ್ವಹಣೆ, ಮತ್ತು ಸಂಸಾರ ನೌಕೆಯನ್ನು ನಡೆಸುವಲ್ಲಿಯೇ ತಮ್ಮ ಜೀವನ ಸಾಗಿಸುತ್ತಿರುವ ಮನೆ ಹಿರಿಯರು, ಮಹಿಳೆಯರು, ಮಕ್ಕಳ ಮನದಲ್ಲಿ ಕೀರ್ತನೆ, ಹರಿಕಥೆ, ಮಹಾಭಾರತ, ರಾಮಾಯಣದ ಧಾರ್ಮಿಕ ಮತ್ತು ಸಾಂಸ್ಕೃತಿಕ–ಸಂಸ್ಕಾರ, ನಡೆ–ನುಡಿ, ಆಚಾರ–ವಿಚಾರ ಮತ್ತು ಮೌಲ್ವಿಕ ವೈಚಾರಿಕ ವಿಷಯಗಳ ಬಗೆಗೆ ಅರಿವು ಮೂಡಿಸಬೇಕಾಗಿದೆ ಎಂದರು. ಬಿ.ಎಲ್..ಡಿ.ಇ ವೈದ್ಯಕೀಯ ಕಾಲೇಜಿನ ಪ್ರಾಧ್ಯಾಪಕಿ ಡಾ. ಜ್ಯೋತಿ ಖೊದ್ನಾಪೂರ ಮಾತನಾಡಿ, ಅಧ್ಯಾತ್ಮ ಮತ್ತು ವಿಜ್ಞಾನ ಎರಡು ಒಂದೇ ನಾಣ್ಯದ ಮುಖಗಳಿದ್ದಂತೆ. ನಮ್ಮ ಋಷಿ ಮುನಿಗಳು, ಮತ್ತು ಹಿರಿಯರು ಧ್ಯಾನ, ತಪ್ಪಸ್ಸು, ಯೋಗದ ಮಹತ್ವದ ಬಗ್ಗೆ ನಮಗೆ ಪರಿಚಯಿಸಿದ್ದಾರೆ. ನಮ್ಮ ಬದುಕು ಸುಖಮಯ ಮತ್ತು ಸುಂದರವಾಗಬೇಕಾದರೆ ನಮ್ಮಲ್ಲಿ ಇತರರಿಗೆ ಸದಾ ಒಳ್ಳೆಯದನ್ನೇ ಮಾಡುವ ಮನಸ್ಥಿತಿ ಒಡಮೂಡಬೇಕು ಎಂದರು.

ಕಾರ್ಯಕ್ರಮದಲ್ಲಿ ದೇವಸ್ಥಾನದ ಅಧ್ಯಕ್ಷ ಸಂತೋಷ ಪಾಟೀಲ, ಎಂ.ಆರ್.ಪಾಟೀಲ, ಪ್ರೊ. ಎಂ.ಎಸ್. ಖೊದ್ನಾಪೂರ, ಎಸ್.ಜಿ. ನಿಂಗನಗೌಡ್ರ, ವೆಂಕಟೇಶ ಹೊಸಮನಿ, ಬಿ.ಆರ್.ಬಿರಾದಾರ, ಆರ್.ಬಿ.ಕುಮಟಗಿ, ಸುರೇಶ ಹಲಕುಡೆ, ಆರ್.ಎಸ್.ಕೋಷ್ಠಿ, ಲಕ್ಷ್ಮಣ ಶಿಂಧೆ ಇನ್ನಿತರರು ಉಪಸ್ಥಿತರಿದ್ದರು.

# ಎಸ್ಸೆಎಸ್ಸೆಲ್ಸಿ 3ನೇ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆ :ಶಬೀರ್ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೂರನೇ ಭಾಷೆಗೆ ಗ್ರೇಡಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ನಿರ್ಧರಿಸಿರುವುದು ಅತ್ಯಂತ ಸ್ವಾಗತಾರ್ಹ ಮತ್ತು ವಿದ್ಯಾರ್ಥಿ ಸ್ನೇಹಿ ಕ್ರಮವಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ (ಕ.ರ.ವೇ) ಅಥಣಿ ತಾಲೂಕು ಅಧ್ಯಕ್ಷ ಶಬೀರ್ ಸಾತಬಚ್ಚೆ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಮೂರನೇ ಭಾಷೆಯು ಪರೀಕ್ಷೆಯ ದೃಷ್ಟಿಯಿಂದ ಕೆಲವೊಮ್ಮೆ ಸವಾಲಾಗಿ ಪರಿಣಮಿಸುತ್ತಿತ್ತು. ಈಗ ಸರ್ಕಾರ ಈ ವಿಷಯಕ್ಕೆ ಅಂಕಗಳ ಬದಲಾಗಿ ಗ್ರೇಡಿಂಗ್ ವ್ಯವಸ್ಥೆ ತರುತ್ತಿರುವುದು ವಿದ್ಯಾರ್ಥಿಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡಲಿದೆ. ಇದರಿಂದ ವಿದ್ಯಾರ್ಥಿಗಳು ಇತರ ಪ್ರಮುಖ ವಿಷಯಗಳತ್ತ ಹೆಚ್ಚಿನ ಗಮನ ಹರಿಸಲು ಸಾಧ್ಯವಾಗುತ್ತದೆ," ಎಂದು ಅಭಿಪ್ರಾಯಪಟ್ಟಿದ್ದಾರೆ.

"ಶಿಕ್ಷಣ ಕ್ಷೇತ್ರದಲ್ಲಿ ಇಂತಹ ಸುಧಾರಣೆಗಳು ಅತ್ಯಗತ್ಯ. ಕೇವಲ ಅಂಕಗಳ ಬೆನ್ನತ್ತದೆ ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಪೂರಕವಾದ ವಾತಾವರಣ ನಿರ್ಮಿಸಲು ಈ ಕ್ರಮ ಸಹಕಾರಿಯಾಗಿದೆ. ಸರ್ಕಾರದ ಈ ನಿರ್ಧಾರವು ಲಕ್ಷಾಂತರ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ಕಾಯ್ದಿದೆ," ಎಂದು ಶಬೀರ್ ಸಾತಬಚ್ಚೆ ಸರ್ಕಾರದ ಕ್ರಮವನ್ನು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

# ಮಾರುತಿ ಸೇವಕನಾ ಮಾಡೋ ನಿನ್ನಂತೆ ನನ್ನ..




■ ಉದಯರಶ್ಮಿ ದಿನಪತ್ರಿಕೆ

ಪ್ರತಿ ಊರಾಗೂ ಊರ ಹೊರಗ ಹನುಮಪ್ಪನ ಗುಡಿ ಇರತಾವ ಎಂದು ನಾನು ಸಣ್ಣವಳಿದ್ದಾಗ ನನ್ನಜ್ಜ ಹೇಳಿದ ಮಾತು ನನಗಿನ್ನೂ ನೆನಪಿದೆ. ನನ್ನಜ್ಜ ಹನಮಪ್ಪಗ ವಾರ ಶನಿವಾರ ವಾನರ ಸೈನ್ಯದಂತಿದ್ದ ನಮ್ಮನ್ನ ಕರೆದುಕೊಂಡು ಹೋಗುತ್ತಿದ್ದ ರೀತಿ ಇಂದಿಗೂ ಮನದಲ್ಲಿ ಹಸಿರಾಗಿದೆ. ಈಗ ಊರುಗಳು ಎಕ್ಸಟೆನ್ಷನ್ ಹೆಸರಿನೊಳಗೆ ಆ ಕಡೆ ಈ ಕಡೆ ಬೆಳೆದು ಊರ ಹೊರಗಿನ ಹನುಮಪ್ಪ ಊರ ನಡುವೆ ಬಂದು ನಮ್ಮೆಲ್ಲರ ನಡುವೆ ನಿಂತಿದ್ದಾನೆ. ನಮಗೆಲ್ಲ ಹನುಮಪ್ಪನ ಮುಖ ಕಂಡು ವಿಚಿತ್ರ ಅನಿಸೋದು ನೋಡೋಕೆ ಬಲವಂತನಂತೆ ವಿಶೇಷ ಶಕ್ತಿಯುಳ್ಳವನಂತೆ ಕಂಡರೂ ಅದೇಕೆ ಹನುಮಂತನ ದವಡೆಗಳು ಉಬ್ಬಿವೆ? ಕೈಯ್ಯಲ್ಲಿ ಗುಡ್ಡ ಹಿಡಿದು ಏಕೆ ನಿಂತಿದ್ದಾನೆ? ಹಾರುವ ಪೋಸ್‌ನಲ್ಲೇ ಏಕಿರ್ತಾನೆ? ಉಳಿದ ದೇವರುಗಳಂತೆ ಕುಳಿತ ಭಂಗಿಯಲ್ಲಿ ಕಾಣ ಸಿಗುವುದು ತುಂಬಾ ಕಡಿಮೆ. ಎಂಬ ಹಲವಾರು ಪ್ರಶ್ನೆಗಳು ತಲೆತುಂಬ ಗಿರಗಿಟ್ಲೆ ಆಡುವಾಗ ಅವುಗಳನ್ನು ಅಜ್ಜನ ಮುಂದಿಡುತ್ತಿದ್ದೆವು. ಪ್ರಶ್ನೆಗಳಿಗೆಲ್ಲ ಉತ್ತರ ನೀಡಲು ನಮ್ಮಜ್ಜ ತನಗೆ ಗೊತ್ತಿರುವ ಪುರಾಣದ ಮತ್ತು ರಾಮಾಯಣದ ಕಥೆಗಳನ್ನು ಕಣ್ಮುಂದೆ ಕಟ್ಟುವಂತೆ ಹೇಳುವ ರೀತಿ ನಮಗೆಲ್ಲ ಹನುಮಪ್ಪನ ಬಗ್ಗೆ ವಿಶೇಷ ಭಕ್ತಿ ಹುಟ್ಟುವ ಹಾಗೆ ಮಾಡುತ್ತಿದ್ದವು. ಅವನ ಲೀಲೆಗಳ ರಹಸ್ಯವನ್ನು ಇನ್ನಷ್ಟು ಮತ್ತಷ್ಟು ತಿಳಿದುಕೊಳ್ಳಲು ಪ್ರೇರೇಪಿಸುತ್ತಿದ್ದವು. ಈ ಕುತೂಹಲ ನಮಗಷ್ಟೇ ಅಲ್ಲ ಸಾಮಾನ್ಯವಾಗಿ ಎಲ್ಲ ಮಕ್ಕಳಿಗೂ ಹನುಮಪ್ಪನ ಕುರಿತು ಕೌತುಕದ ಪ್ರಶ್ನೆಗಳು ಮೂಡುತ್ತವೆ. ಅವರು ಉತ್ತರಕ್ಕಾಗಿ ಹಿರಿಯರ ಮುಖ ನೋಡುತ್ತಾರೆ. ಹೀಗೆ ಮಕ್ಕಳಿಂದ ಹಿಡಿದು ಹಿರಿಯರ ಮನದಲ್ಲಿ ಛಾಪೊತ್ತಲು ಕಾರಣ ಆತನಲ್ಲಿರುವ ವಿಶೇಷ ಗುಣಗಳು. ಉತ್ಕೃಷ್ಟ ಗುಣಗಳು ಯಾವಾಗಲೂ ಪೂಜ್ಯನೀಯವಾಗಿರುತ್ತವೆ. ಹೀಗಾಗಿ ಹನುಮಂತ ಈ ಕಲಿಯುಗದಲ್ಲೂ ನಮ್ಮೆಲ್ಲರ ಮನೆ ಮನೆಗಳಲ್ಲಿ ಮನೆ ಮಾಡಿದ್ದಾನೆ ಆರಾಧನೆಗೆ ಅರ್ಹನಾಗಿದ್ದಾನೆ.



**ಹನುಮನ ಹಿನ್ನೆಲೆ**

ಹಿಂದೂ ಧರ್ಮ ಗ್ರಂಥಗಳಲ್ಲಿ ಪೂಜಿಸುವ ದೈವ ಹನುಮಂತ. ವೈದಿಕ ಸಾಹಿತ್ಯದಲ್ಲೂ ಹನುಮನ ಬಗೆಗೆ ಉಲ್ಲೇಖವಿದೆ. ರಾಮಾಯಣದಲ್ಲಂತೂ ವಾಯುಪುತ್ರನ ಪಾತ್ರ ಹಿರಿದಾದುದು ಚಿರಸ್ಮರಣೀಯವಾದುದು. ಈತನನ್ನು ಆಂಜನೇಯ ಅಂಜನಾತನಯ ಕೇಸರಿ ನಂದನ ವಾನರ ಶ್ರೇಷ್ಠ ಹನುಮಾನ ಮಾರುತಿ ಎಂಬ ವಿವಿಧ ಹೆಸರುಗಳಲ್ಲಿ ಕರೆಯುತ್ತ ನೆನೆಯುತ್ತಾರೆ. ಪುರಾಣಗಳಲ್ಲಿ ಉಲ್ಲೇಖವಾದಂತೆ ಹನುಮ ಕೇಸರಿಯೆಂಬ ವಾನರ ರಾಜನ ಮಡದಿ ಅಂಜನಾ ದೇವಿಯೆಂಬ ಅಪ್ಸರೆಯಲಿ ವಾಯುವಿನ ಅಂಶದಿಂದ ಜನ



ತಾಳಿದನೆಂದು ಹೇಳಲಾಗಿದೆ.

**ಹನುಮ ಎಂಬ ಹೆಸರು ಹೇಗೆ ಬಂತು?**

ಹನುಮನ ಕಲ್ಪನೆಗಳಲ್ಲಿ ಹಾಸು ಹೊಕ್ಕಾಗಿರುವ ಕತೆಗಳು ವೇದ ವಾಂಙ್ಮಯದಲ್ಲಿ ಹಲವಾರು ಸಿಗುತ್ತವೆ. ಅವುಗಳನ್ನೆಲ್ಲ ಕೇಳಿದಾಗ ಹನುಮನ ಬಗೆಗಿನ ಕೌತುಕತೆ ನೂರ್ಮಡಿಸುತ್ತದೆ. ಪುಟ್ಟ ಬಾಲಕನಾಗಿದ್ದಾಗ ಹನುಮ ಒಮ್ಮೆ ಸೂರ್ಯನನ್ನು ಹಿಡಿದು ಬಾಯಲ್ಲಿ ಅಡಗಿಸಿಕೊಂಡನಂತೆ ಇದರಿಂದ ಕತ್ತಲೆ ಉಂಟಾಯಿತು. ಕೋಪಗೊಂಡ ಇಂದ್ರ ತನ್ನ ವಜ್ರಾಯುಧದ ಪ್ರಹಾರದಿಂದ ಬಾಲಕ ಅಂಜನಾ ತನಯನ ಹನು (ದವಡೆ) ದೊಡ್ಡದಾಯಿತು ಹೀಗಾಗಿ ಹನುಮ ಎಂಬ ಹೆಸರು ಬಂತು. ಎನ್ನುವದೊಂದು ಸ್ವಾರಸ್ಯಕರ ಕತೆ. ಹನುಮ ಎಂದರೆ ಜ್ಞಾನ ಬುದ್ಧಿವಂತಾಂ ವರಿಷ್ಟ ಪೂರ್ಣ ಪ್ರಜ್ಞ ಎಂಬುದು ಆಚಾರ್ಯ ಮಧ್ವರ ಒಕ್ಕಣಿಕೆ.

**ಭಕ್ತಿ-ಭಾವರಶ್ಮಿ**

**ವಿವಿಧೆಡೆ ಆಚರಣೆ**

ಏಕ ಪತ್ನಿ ವ್ರತಸ್ಥ ಶ್ರೀರಾಮನ ಪರಮ ಭಕ್ತನೆಂದೇ ಖ್ಯಾತಿಯನ್ನು ಸಂಪಾದಿಸಿದ ಹನುಮ ಅವತರಿಸಿದ ದಿನವನ್ನು ಹನುಮ ಜಯಂತಿ ಎಂದು ಆಚರಿಸಲಾಗುತ್ತದೆ. ಚೈತ್ರ ಮಾಸದಲ್ಲಿ ಶುಕ್ಲ ಪಕ್ಷದ ಹದಿನೈದನೆಯ ದಿನ ಅಂದರೆ ಚೈತ್ರ ಪೂರ್ಣಿಮೆಯೆಂದು ಹನುಮ ಜಯಂತಿಯನ್ನು ಭಾರತದಲ್ಲಿ ವಿಶಿಷ್ಟ ಶ್ರದ್ಧಾ ಭಕ್ತಿಯೊಂದಿಗೆ ಆಚರಿಸುತ್ತಾರೆ. ಆ ದಿನ ಭಕ್ತಾದಿಗಳೆಲ್ಲ ಚುಮು ಚುಮು ಬೆಳಗು ಹರಿಯುವ ಮುನ್ನವೇ ಹನುಮಂತನ ಗುಡಿಯೊಳಗೆ ಭಕ್ತಿಭಾವದ ಪರಾಕಾಷ್ಟೆಯಿಂದ ಹೂ ಹಣ್ಣು ಕಾಯಿ ಎಣ್ಣೆ ಬತ್ತಿ ಹಿಡಿದು ನಿಂತಿರುತ್ತಾರೆ. ದುಷ್ಟ ಶಕ್ತಿಯನ್ನು ಸಂಹರಿಸುವ ರೂಪದಲ್ಲಿರುವ ಹನುಮನ ಮೂರ್ತಿಯಿಂದ ತಿಲಕವನ್ನು ತಮಗೂ ಆ ಧೀರತನ ದಿಟ್ಟತನ ಬರಲಿ ಎಂದು ಕೇಳುತ್ತ ತಮ್ಮ ಹಣೆಗೆ ಹಚ್ಚಿಕೊಳ್ಳುತ್ತಾರೆ. ಬುತ್ತಿ ಪೂಜೆ ಬೆಣ್ಣೆ ಪೂಜೆ ಎಲೆ ಪೂಜೆ ಚಂದಿರ ಪೂಜೆ ಹೀಗೆ ವಿವಿಧ ಹೆರಿನಲ್ಲಿ ನಡೆವ ಪೂಜೆಯಲ್ಲಿ ಭಜನೆಯಲ್ಲಿ ಭಾಗಿಯಾಗುತ್ತಾರೆ. ಭಜನೆಗಳಲ್ಲಂತೂ ಭಕ್ಗ ಗಣದ ಭಕ್ತಿ ಹೃನ್ಮನವನ್ನು ಧನ್ಯವಾಗಿಸುವ ರೀತಿಯಲ್ಲಿರುತ್ತದೆ. ಅನ್ನ ದಾಸೋಹದಲ್ಲಿ ಬಡವ ಬಲ್ಲಿದನೆಂಬ ಭಾವ ತೊರೆದು ಪ್ರಸಾದ ಸ್ವೀಕರಿಸಿ ಪುನೀತ ಭಾವ ಹೊಂದುತ್ತಾರೆ. ತಮಿಳು ನಾಡಿನಲ್ಲಿ ಮಾರ್ಗಶಿರ ಮಾಸದ ಮೂಲಾ ನಕ್ಷತ್ರದಲ್ಲಿ ಆಚರಿಸಿದರೆ ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲಿ ಚೈತ್ರ ಪೂರ್ಣಿಮೆಯಂದು ಪ್ರಾರಂಭವಾಗಿ ಕೃಷ್ಣ ಪಕ್ಷದ 10ನೇ ದಿನ ವೈಶಾಖ ಮಾಸದಲ್ಲಿ ಮುಗಿಯುತ್ತದೆ. ಒಟ್ಟು 41 ದಿನಗಳವರೆಗೆ ಆಚರಿಸುವರು. ಮಹಾರಾಷ್ಟ್ರದಲ್ಲಿ ಹಿಂದೂ ಚಾಂದ್ರಮಾನದ 14 ನೇ ದಿನ ಅಶ್ವಿನಿ ಮಾಸದಲ್ಲಿ ಚತುರ್ದಶಿ ದಿನದಂದು ಆಚರಿಸಲಾಗುವುದು. ಹೀಗೆ ಮೂರು ಲೋಕದಲ್ಲೂ (ಸ್ವರ್ಗ ನರಕ ಭೂಲೋಕ ) ಶಕ್ತಿವಂತನಾದ ಕೇವಲ ಒಂದೂವರೆ ವರ್ಷದವನಿದ್ದಾಗ ಮುಕ್ಕೋಟಿ ದೇವರಿಂದ ಆಶೀರ್ವಾದ ಪಡೆದ ವಾನರ ದೇವನಾದ ಹನುಮನ ಜಯಂತಿಯನ್ನು ಭಾರತದಾದ್ಯಂತ ಸಡಗರ ಸಂಭ್ರಮದಿಂದ ಆಚರಿಸುತ್ತಾರೆ.

ನಿನ್ನಂತೆ ನಾನಾಗಲಾರೆ ಏನು ಮಾಡಲಿ ಹನುಮ

ತ್ರೇತಾಯುಗದಲ್ಲಿ ರಾಮ ಭಕ್ತನಾಗಿ ಅವತರಿಸಿದ ಹನುಮ ದ್ವಾಪಾರಯುಗದಲ್ಲೂ ಕಾಣ ಸಿಗುತ್ತಾನೆ ಕಲಿಯುಗದಲ್ಲೂ ನಮ್ಮ ನಡುವೆ ಪೂಜಿತನಾಗಿದ್ದಾನೆ. ಆತನ ದಿವ್ಯ ದರುಶನಕೆ ನಾವೆಲ್ಲ ಕಾಯುವುದು ಮನದಲ್ಲಿ ಸ್ಥಿರವಾಗಿ ನೆನೆಯುವುದು ಜನ್ಮ ಸಾರ್ಥಕ ಮಾಡು ಎಂದು ಬೇಡಿಕೊಳ್ಳುವುದು ಆ ಮಾರುತಿ ಒಲಿದರೆ ಫಲಿಸದ ಕೆಲಸವು ಯಾವುದು? ರಾಮನ ದುಃಖವನ್ನೇ ದೂರ ಮಾಡಿದ ಆತನಿಗೆ ನಮ್ಮ ದುಃಖಗಳು ಯಾವ ಲೆಕ್ಕ ನಮ್ಮ ಕಷ್ಟಗಳನು ಕ್ಷಣಾರ್ಧದಲ್ಲಿ ಮೋಡದಂತೆ ಕರಗಿಸುವ ಶಕ್ತಿ ಅವನಿಗಿದೆ ಎಂಬ ನಂಬಿಕೆ ಭಕ್ತಾದಿಗಳಿಗೆ. ಸಾಗರವನ್ನು ದಾಟಿದವನು ನಮ್ಮ ಸಂಸಾರ ಸಾಗರವನ್ನು ಸಸಾರವಾಗಿ ದಾಟಿಸಲು ನೆರವಾಗುವನು. ಭಕ್ತರು ಕರೆದಲ್ಲಿಗೆ ನೆರಳಿನಂತೆ ಹಿಂಬಾಲಿಸುವನು ಕರುಣಾ ಕಂಗಳಿಂದ ನಮಗೆ ಶಾಂತಿ ನೀಡುವನು. ಹೊಗಳಿಕೆ ಬಯಸದೇ ಬರೀ ಸೇವೆ ಮಾಡುವ ರಾಮ ಧೂತನಿಗೆ ಅನೇಕ ವಿಧವಾದ ಶಕ್ತಿ ಇರುವುದನ್ನು ರಾಮಾಯಣದಲ್ಲಿ ತಿಳಿದುಕೊಳ್ಳುತ್ತೇವೆ. ಪುರಾಣ ಶಾಸ್ತ್ರಗಳಲ್ಲಿ ಪುಣ್ಯ ಕಥಾನಕಗಳಲ್ಲೂ ಹನುಮನ ಸ್ಮರಣೆಯಿಂದಾಗುವ ಲಾಭಗಳ ಬಗೆಗೆ ಉಲ್ಲೇಖ ದೊರಕುವವು. ಕಾಮ ಕ್ರೋಧಗಳನ್ನು ದಹಿಸುವ ಶಕ್ತಿಯೂ ಆಕಾಶ ಭೂಮಿಗಳನು ಒಂದು ಮಾಡಿ ನಿಲ್ಲುವ ಶಕ್ತಿ ನಿನ್ನಲ್ಲಿದೆ (ಹನುಮನಲ್ಲಿದೆ)ನಿನ್ನಂತೆ ನಾನಾಗಲಾರೆ ಏನು ಮಾಡಲಿ ಹನುಮ ಎಂದು ಭಕ್ತರೆಲ್ಲ ಪರಿ ಪರಿಯಾಗಿ ಪರವಶರಾಗಿ ಆ ಭವ್ಯ ರೂಪದಲ್ಲಿ ಬೇಡಿಕೊಳ್ಳುವರು.

**ಸೇವಕನಾ ಮಾಡೋ ನಿನ್ನಂತೆ ನನ್ನ**

ಇಷ್ಟೆಲ್ಲಾ ಶಕ್ತಿ ಸಾಹಸವುಳ್ಳ ಹನುಮನಿಗೆ ನಾನು ನನ್ನದು ಎಂಬ ಅಹಂಕಾರ ಇರಲೇ ಇಲ್ಲ. ನೀನೇ ಎನ್ನುತ ರಾಮಚಂದ್ನ ಸೇವೆಗೆ ಸದಾ ಸಿದ್ಧನಾಗಿದ್ದ ಕಂಕಣ ಬದ್ಧನಾಗಿದ್ದ ರಾಮನಿಗಾಗಿ ಕಡಲು ಹಾರಿದ ಸೀತೆಗಾಗಿ ಸೇತುವೆ ಕಟ್ಟಿದ ಲಕ್ಷ್ಮಣನಿಗಾಗಿ ಬೆಟ್ಟ ಹತ್ತಿದ ಹೀಗೆ ಸೇವೆಯು ನೀಡುವ ಮಹದನಂದವನು ಜಗಕೆ ಸಾರಿದ. ಸೇವೆಯು ಕೊಡುವ ಫಲದ ಕಲ್ಪನೆಯನು ಜಗಕೆಲ್ಲ ತೋರಿದ ಸೇವೆಯ ಬಲದಿಂದ ಕಿಂಕರನಾದವನು ದೇವರಾಗಲು ಸಾಧ್ಯ ಎಂಬ ದಿವ್ಯ ಸಂದೇಶ ನೀಡಿದವನು. ವಿನಯವಂತಿಕೆ ಮರೆತು ಸೇವೆಯ ಮಹತ್ವವನು ಮರೆತು ಅಜ್ಞಾನದಲ್ಲಿ ದೂರ್ತತನದಲ್ಲಿ ಮೆರೆಯುತ್ತಿರುವ ಈ ಕಾಲ ಘಟ್ಟದಲ್ಲಿ ಹನುಮ ತುಂಬಾ ಪ್ರಸ್ತುತನಾಗುತ್ತಾನೆ. ಮಾರುತಿ ಸೇವಕನಾ ಮಾಡೋ ನಿನ್ನಂತೆ ನನ್ನ ಎಂದು ಬೇಡಿಕೊಂಡು ಸೇವೆಯನ್ನು ಉಸಿರಾಗಿಸಿಕೊಂಡು ಸೇವೆಯಲ್ಲಿ ತೊಡಗಿದರೆ ಈ ಹನುಮ ಜಯಂತಿಗೆ ನಿಜವಾದ ಅರ್ಥ ದಕ್ಕುವುದಲ್ಲದೇ ನಮ್ಮ ಜನ್ಮವೂ ಪಾವನವಾಗುವುದು ಖಚಿತ.

■ ಲೇಖನ
ಜಯಶ್ರೀ.ಜೆ.ಅಬ್ಬಿಗೇರಿ
ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಏ.4 ರಂದು ನಿರಂತರ ವೈದ್ಯಕೀಯ ಶಿಕ್ಷಣ ಮತ್ತು ಕಾರ್ಯಾಗಾರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಶ್ರೀ ಬಿ. ಎಂ. ಪಾಟೀಲ ಮೆಡಿಕಲ್ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದಲ್ಲಿ ಕಿವಿ, ಮೂಗು, ಗಂಟಲು ವಿಭಾಗದಿಂದ ಅಲರ್ಜಿ ಕ್ಷೇತ್ರದ ಹೊಸ ಒಳನೋಟಗಳು ಕು–ರಿತು ನಿರಂತರ ವೈದ್ಯಕೀಯ ಶಿಕ್ಷಣ(ಅಒಇ) ಮತ್ತು ಕಾರ್ಯಾಗಾರ ಏಪ್ರಿಲ್ 4 ರಂದು ಶನಿವಾರ ನಡೆಯಲಿದೆ.

ಬಿ.ಎಲ್.ಡಿ.ಇ ಆಸ್ಪತ್ರೆಯ ಟ್ರಾಮಾ ಸೆಂಟ–ರ್‌ನ 2ನೇ ಮಹಡಿಯ ಮಿನಿ ಆಡಿಟೋರಿಯಂನಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಬೆಂಗಳೂರಿನ ಖ್ಯಾತ ಅಲರ್ಜಿ ತಜ್ಞೆ ಡಾ. ಗಾಯತ್ರಿ ಪಂಡಿತ, ಡಾ. ಶೃತಿ ಮಂಜುನಾಥ ಮತ್ತು ಹುಬ್ಬಳ್ಳಿ ಚಿಕ್ಕಮಕ್ಕಳ ತಜ್ಞ ಡಾ. ಬಾಹುಬಲಿ ಇಂಗಳೆ ಅವರು ಅಲರ್ಜಿ ಮತ್ತು ಇಮ್ಯುನಾಲಜಿ ಕ್ಷೇತ್ರದಲ್ಲಿನ ವಿನೂತನ ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.

ಅಲ್ಲದೇ, ಬಿ. ಎಲ್. ಡಿ. ಇ ಪಲ್ಮನಾಲಜಿಸ್ಟ್ ವಿಭಾಗದ ಡಾ. ಕೀರ್ತಿವರ್ಧನ ಕುಲಕರ್ಣಿ ಅವರು ಅಸ್ಥಮಾ ಕುರಿತು ಉಪನ್ಯಾಸ ನೀಡಲಿದ್ದಾರೆ.

ಅಲರ್ಜಿ ಸಂಬಂಧಿತ ರೋಗಗಳ ಪತ್ತೆಹಚ್ಚುವಿಕೆ ಮತ್ತು ಚಿಕಿತ್ಸೆ ಕುರಿತ ಮಾಹಿತಿ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ, ವೈದ್ಯರು ಹಾಗೂ ಆರೋಗ್ಯ ಕ್ಷೇತ್ರದ ವೃತ್ತಿಪರ–ರಿಗೆ ಮಕ್ಕಳ ತಜ್ಞರು, ಕಿವಿ ಮೂಗು ಗಂಟಲು ತಜ್ಞರು, ಚರ್ಮರೋಗ ಹಾಗೂ ಸಾಮಾನ್ಯ ವೈದ್ಯರಿಗೆ ಈ ಕಾರ್ಯಾಗಾರ ಉಪಯುಕ್ತವಾಗಲಿದೆ.

ಈ ಕಾರ್ಯಗಾರದಲ್ಲಿ ಭಾಗವಹಿಸುವ ವೈದ್ಯರಗಳಿಗೆ ಸ್ವತಃ ಅಲರ್ಜಿಯ ಚರ್ಮ ಪರೀಕ್ಷೆ (SKIN PRICK TEST) ಮಾಡಲು ಕಾರ್ಯಗಾರ ಇದ್ದು, ಈ ಕಾರ್ಯಾಗಾರದಿಂದ ವೈದ್ಯರು ರೋಗಿಗಳಿಗೆ ಅಲರ್ಜಿಯ ಚರ್ಮ ಪರೀಕ್ಷೆ (SKIN PRICK TEST) ಮಾಡಲು ಆತ್ಮವಿಶ್ವಾಸ ಹೆಚ್ಚುತ್ತದೆ.

ಜಿಲ್ಲೆಯ ಎಲ್ಲ ವೈದ್ಯರು ಈ ಕಾರ್ಯಗಾರದ ಉಪಯೋಗವನ್ನು ತೆಗೆದುಕೊಳ್ಳಬೇಕು ಎಂದು ಇ. ಎನ್.ಟಿ ಪ್ರಾಧ್ಯಾಪಕಿ ಡಾ. ಎಚ್. ಟಿ. ಲತಾದೇವಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂಡಿಯಲ್ಲಿ ಸಂಭ್ರಮದ ಹನುಮಾನ ಜಯಂತಿ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ನಗರ ಸೇರಿದಂತೆ ತಾಲೂಕಿನಲ್ಲಿ ಹನುಮಾನ ಭಕ್ತರು ಶ್ರದ್ದೆ ಮತ್ತು ಭಕ್ತಿಯಿಂದ ಹನುಮ ಜಯಂತಿ ಆಚರಿಸಿದರು.

ನಗರದ ಹಿರೇಇಂಡಿ, ಮಹಾವೀರ ವೃತ್ತದಲ್ಲಿರುವ ಅಗಸಿ ಹನುಮಾನ ಮಂದಿರ, ಕೆಈಬಿ ಹನುಮಾನ ದೇವಸ್ಥಾನ, ಪಂಚಾಯತ ರಾಜ ಆವರಣದಲ್ಲಿರುವ ಹನುಮಾನ ಮಂದಿರ, ಆರೋಗ್ಯ ಇಲಾಖೆಯಲ್ಲಿರುವ ಹನುಮಾನ ಮಂದಿರ,ಮಲ್ಲಿಕಾರ್ಜುನ ದೇವಸ್ಥಾನ , ಸಿಂದಗಿ ರಸ್ತೆ ಸೇರಿದಂತೆ ಇತರೆ ಎಲ್ಲ ಕಡೆಗೂ ಹನುಮ ಜಯಂತಿ ಆಚರಿಸಲಾಯಿತು.

ದೇಶಪಾಂಡೆ ತಾಂಡಾ, ಸಾಲೋಟಗಿ ಗ್ರಾಮದ ಮೂರು ಕಡೆ, ಆಳೂರ, ಇಂಗಳಗಿ ಅಗರಖೇಡ ಸೇ–ರಿದಂತೆ ತಾಲೂಕಿನ ಅನೇಕ ಕಡೆ ಹನುಮ ಜಯಂತಿ ಆಚರಿಸಲಾಯಿತು.

ಎಲ್ಲ ಕಡೆ ಬೆಳಗ್ಗೆ ಆರತಿ, ಅಭಿಷೇಕ, ಪೂಜೆ ಅಲಂಕಾರ ಪಾಲಕಿ ಮೆರವಣಿಗೆ , ತೊಟ್ಟಿಲು ಹಾಕುವ ಕಾರ್ಯಕ್ರಮ ಜೊತೆಗೆ ಅನ್ನ ಪ್ರಸಾದ ವಿತರಣೆ ನಡೆಯಿತು.

# ಕೃಷಿ ಆಧಾರಿತ ಉದ್ಯೋಗ ಸೃಷ್ಟಿ ಇಂದಿನ ಅಗತ್ಯ: ಶೇಷಮೂರ್ತಿ ಅವಧಾನಿ




ಕಲಬುರಗಿ:ಇಂದು ಪರಿಸರ ರಕ್ಷಣೆ, ಪರಿಸರ ಪೊಷಣೆ ಎಲ್ಲರ ಜವಾಬ್ದಾರಿಯಾಗಬೇಕಿದೆ. ಕೃಷಿ ಆಧಾರಿತ ಉದ್ಯೋಗ ಸೃಷ್ಟಿಯಾದರೆ ಮಾತ್ರ ಪರಿಸರ, ಪ್ರಕೃತಿ ಹಚ್ಚ ಹಸಿರಾಗಿರಲು ಸಾಧ್ಯ ಎಂದು ಹಿರಿಯ ಪತ್ರಕರ್ತ ಶೇಷಮೂರ್ತಿ ಅವಧಾನಿಯವರು ಹೇಳಿದರು.

ಕಲುಬುರಗಿ ತಾಲೂಕಿನ ಔರಾದ(ಬಿ) ಗ್ರಾಮದ ಶ್ರೀಸ್ವಾಮಿಸಮರ್ಥ ದೇವಸ್ಥಾನದ ಆವರಣದಲ್ಲಿ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯ, ಆಯ್.ಕ್ಯು.ಎ.ಸಿ. ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯ ರಾಷ್ಟ್ರೀಯ ಸೇವಾ ಯೋಜನೆಯ ಕೋಶದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೃಷಿಯೇತರ ಜಮೀನು ಮುಂದಿನ ಯುವಪೀಳಿಗೆಯನ್ನು ಕತ್ತಲಲಿ ನೂಕುವ ಸಂಭವವಿದೆ. ಔದ್ಯೋಗಿಕರಣ ಪರಿಸರಕ್ಕೆ ಪೂರಕವಾಗಿದ್ದರೆ ಮಾತ್ರ ಸಮಾಜ ನೆಮ್ಮದಿಯಿಂದ ಇರಲು ಸಾಧ್ಯ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗುಲ್ಬರ್ಗ ವಿಶ್ವವಿದ್ಯಾಲಯ ಕಲಬುರಗಿಯ ಎನ್.ಎಸ್.ಎಸ್. ಕೋಶದ ಸಂಯೋಜನಾಧಿಕಾರಿ ಡಾ.ಎಚ್.ಎಸ್. ಜಂಗಯವರು ಮಾತನಾಡಿ, ಯುವಜನತೆ ಸ್ಥಿರ ಮಾದರಿ ಕಡೆ ವಾಲುತ್ತಿರುವುದು ದುರಂತ ಎಂದು ಕಳವಳ ವ್ಯಕ್ತಪಡಿಸುತ್ತಾ, ಯುವಜನತೆ ತಮ್ಮ ವ್ಯಕ್ತಿತ್ವ ರೂಪಿಸಿಕೊಳ್ಳುತ್ತ ದೇಶಕ್ಕೆ ಬೆನ್ನೆಲುಬಾಗುವ ಅವಶ್ಯಕತೆ ಇದೆ ಎಂದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಉಪಪ್ರಾಚಾರ್ಯರಾದ ಡಾ. ಗುರುಮಧ್ವಾಚಾರ್ಯರವರು ಮಾತನಾಡಿದರು. ಅಧ್ಯಕ್ಷತೆಯನ್ನು ವಹಿಸಿದ್ದ ನೂತನ ವಿದ್ಯಾಲಯ ಸಂಸ್ಥೆಯ ಕಾಲೇಜು ಶೈಕ್ಷಣಿಕ ಮಂಡಳಿಯ ಸದಸ್ಯರು ಹಾಗೂ ನೂತನ ವಿದ್ಯಾಲಯ ಸಂಸ್ಥೆಯ ಮಾಜಿ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾದ ಗಿರೀಶ್ ಗಲಗಲಿಯವರು ಮಾತನಾಡಿ, ಶಿಬಿರಾರ್ಥಿಗಳು ರಾಷ್ಟ್ರೀಯ ಸೇವಾ ಯೋಜನೆಯ ಮೂಲ ಧ್ಯೇಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ವೇದಿಕೆಯ ಮೇಲೆ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾರಿಗಳಾದ ಡಾ. ದಯಾನಂದ ಎಂ. ಶಾಸ್ತ್ರಿ, ಪ್ರೊ.ಗುರುದತ್ತ ಪಿ. ಕುಲಕರ್ಣಿ, ಶ್ರೀಕಾಂತ್ ಪಂಡಿತ ಹಾಗೂ ಡಾ. ಮಲ್ಲಿನಾಥ ಎಸ್. ತಳವಾರ ಉಪಸ್ಥಿತರಿದ್ದರು.

ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರದಲ್ಲಿ ಅರವತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು. ಕುಮಾರಿ ಸ್ಫೂರ್ತಿ ಮತ್ತು ಕುಮಾರಿ ಪ್ರೀತಿ ಎನ್.ಎಸ್.ಎಸ್. ಗೀತೆ ಹಾಡಿದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾ–ರಿಗಳಾದ ಡಾ. ದಯಾನಂದ ಎಂ. ಶಾಸ್ತ್ರಿಯವರು ಪ್ರಾಸ್ತಾವಿಕ ಹಾಗೂ ಸ್ವಾಗತ ಭಾಷಣ ಮಾಡಿದರು. ಡಾ. ಮಲ್ಲಿನಾಥ ಎಸ್. ತಳವಾರ ನಿರೂಪಿಸಿದರು. ಕುಮಾರಿ ಸೃಷ್ಟಿ ವಂದಿಸಿದರು.

# ಎನ್ ಎಸ್ ಎಸ್‌ನಿಂದ ವ್ಯಕ್ತಿತ್ವ ವಿಕಸನ: ಡಾ.ಕಾಂತಾ

ಕಲಬುರಗಿ:ರಾಷ್ಟ್ರೀಯ ಸೇವಾ ಯೋಜನೆಯು ಶಿಬಿರಾರ್ಥಿಗಳಲ್ಲಿ ಶಿಸ್ತು, ಸಮಯ ಪಾಲನೆ, ಸಹಬಾಳ್ವೆ, ಶ್ರಮದಾನ ಮಾಡುವುದರ ಮೂಲಕ ವ್ಯಕ್ತಿತ್ವ ವಿಕಾಸನಗೊಳಿಸುತ್ತದೆ. ತಂದೆ ತಾಯಿಗಳಿಗೆ, ಹಿರಿಯರಿಗೆ ಗೌರವ ಕೊಡುವುದೇ ರಾಷ್ಟ್ರೀಯ ಸೇವಾ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಡಾ.ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಸಿದ್ದಪ್ಪಾ ಎಂ.ಕಾಂತಾ ಹೇಳಿದರು. ಫರಹತಾಬಾದನ ಸರ್ಕಾರಿ ಪ್ರಥ–'ಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ 2025–26 ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

# ಹೇಮಾವತಿ ಹೆಗ್ಗಡೆ ಹುಟ್ಟುಹಬ್ಬ: ಹಣ್ಣುಗಳ ವಿತರಣೆ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಮಾತೋಶ್ರೀ ಹೇಮಾವತಿ ಹೆಗ್ಗಡೆ ಅಮ್ಮನವರ ಎಪ್ರೀಲ್ 02 ರಂದು ಹುಟ್ಟುಹಬ್ಬದ ಪ್ರಯುಕ್ತ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಚಡಚಣ ಹಾಗೂ ಇಂಡಿ ತಾಲೂಕಿನ ನಿರ್ಗತಿ–ಕರು ಹಾಗೂ ಹಿರಿಯ ಮಹಿಳೆಯರ ಮನೆ ಮನೆಗೆ ಹೋಗಿ ಹಣ್ಣು ಹಂಪಲು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಿನ ಯೋಜನಾಧಿಕಾರಿ ನಟರಾಜ ಎಲ್.ಎಂ ಅವರು, ಮಾತೋಶ್ರೀ ಹೇಮಾವತಿ ಅಮ್ಮನವರ ಕನಸಿನ ಕೂಸಾದ "ವಾತ್ಸಲ್ಯ" ಕಾರ್ಯಕ್ರಮವು ನಿರ್ಗತಿಕರು ಹಾಗೂ ವಯೋವೃದ್ಧರಿಗೆ ನೆರವಾಗುವ ಉದ್ದೇಶದಿಂದ ಜಾರಿಗೆ ತರಲಾಗಿದ್ದು, ಇದು ಅತ್ಯಂತ ಮಾನವೀಯ ಸೇವೆಯಾಗಿದೆ ಎಂದು ಹೇಳಿದರು.

ಇಂಡಿ ಹಾಗೂ ಚಡಚಣ ತಾಲೂಕುಗಳಲ್ಲಿ ಒಟ್ಟು 128 ನಿರ್ಗತಿಕರಿಗೆ ಪ್ರತಿ ತಿಂಗಳು ರೂ. 1000 ಮಾಶಾಸನವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ನೀಡಲಾಗುತ್ತಿದೆ. ಜೊತೆಗೆ 5 ಜನರಿಗೆ ಮನೆ ನಿರ್ಮಾಣ ಕಾರ್ಯವೂ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವಲಯದ ಮೇಲ್ವಿಚಾರಕರಾದ ಮಹಾಂತೇಶ್ ವಿ.ಎ., ಗಣ್ಯರಾದ ವಿಕಾಸ್ ಪಾಟೀಲ, ಡಾ. ರಾಮಕೃಷ್ಣ ಕುಲಕರ್ಣಿ, ಸಮನ್ವಯ ಅಧಿಕಾರಿ ಜಯಶ್ರೀ, ಸೇವಾ ಪ್ರತಿನಿಧಿಗಳಾದ ವಿಮಲಾ ಗೌಡ್ನೂರ ಹಾಗೂ ಲಕ್ಷ್ಮಿ ಮಠಪತಿ ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

# ಚಿತ್ರಕಲೆ ಭಾವನೆ, ಅನುಭವಗಳ ಅಭಿವ್ಯಕ್ತಿಯ ಮಾಧ್ಯಮ:ಪ್ರೊ.ಬಿರಾದಾರ



ಕಲಬುರಗಿ:ಚಿತ್ರಕಲೆ ಭಾವನೆಗಳು ಮತ್ತು ಅನುಭವಗಳ ಅಭಿವ್ಯಕ್ತಿಯ ಮಾಧ್ಯಮವಾಗಿದ್ದು, ಅದು ಒಂದು ಜಾಗತಿ–ಕ ಭಾಷೆಯಾಗಿದೆ ಎಂದು ಕಲಬುರ್ಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಆರ್.ಆರ್. ಬಿರಾದಾರ್ ಹೇಳಿದರು.

ಸಿಯುಕೆಯ ಸಂಗೀತ ಮತ್ತು ಲಲಿತಕಲೆಗಳ ವಿಭಾಗದಲ್ಲಿ ಏರ್ಪಡಿಸಲಾಗಿರುವ ದೃಶ್ಯಕಲಾ ಪ್ರದರ್ಶನವನ್ನು ಉದ್ಘಾಟಿಸಿ, ಕಲಾಕೃತಿಗಳನ್ನು ವೀಕ್ಷಿಸಿದ ಅವರು 'ಯಾವುದೇ ಬಗೆಯ ಕಲೆಗಳು ಮನುಷ್ಯನಿಗೆ ಆನಂದವನ್ನು ಮತ್ತು ಸಂಸ್ಕಾರವನ್ನು ನೀಡುತ್ತವೆ, ಮನಸ್ಸಿನ ಒತ್ತಡವನ್ನು ಕಡಿಮೆ ಮಾಡುತ್ತವೆ, ಆರೋಗ್ಯವನ್ನು ವೃದ್ಧಿಸುತ್ತವೆ ಮತ್ತು ಜನರನ್ನೂ ಒಂದುಗೂಡಿಸುತ್ತವೆ, ಹಾಗಾಗಿ ಪ್ರತಿಯೊಬ್ಬರೂ ಕಲೆಗಳಲ್ಲಿ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ರಚಿಸಿದ ಇಲ್ಲಿನ ಎಲ್ಲ ಕಲಾಕೃತಿಗಳಲ್ಲಿ ಸಾಮಾಜಿಕ ಸಂವೇದನೆ, ಪರಿಸರದ ಕಾಳಜಿ ಮೊದಲಾದ ಸಂಗತಿಗಳು ಅಭಿವ್ಯಕ್ತಗೊಂಡಿದ್ದು, ನೋಡುಗರಲ್ಲಿ ಪ್ರಕೃತಿ, ಪ್ರಾಣಿ –ಪಕ್ಷಿಗಳ ಬಗ್ಗೆ ಪ್ರೀತಿ, ಅಭಿಮಾನ ಮೂಡಿಸುತ್ತವೆ ಎಂದರಲ್ಲದೆ ದೇಶ, ಭಾಷೆ, ಸಂಸ್ಕೃತಿಗಳ ಬಗ್ಗೆಯೂ ಅರಿವು, ಅಭಿಮಾನಿ ಮೂಡಿಸುವಂತಹ ಕಲಾಕೃತಿಗಳನ್ನೂ ರಸಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಗ್ರಂಥಾಲಯದ ಮುಖ್ಯಸ್ಥರಾದ ಡಾ. ಪರಶುರಾಮ ಕಟ್ಟಿಮನಿ ಅವರು 'ವಿದ್ಯಾರ್ಥಿಗಳ ಪ್ರತಿಭೆ ಅತ್ಯಂತ ಸೃಜನಶೀಲವಾದದ್ದು, ಅವರ ಕಲಾಕೃತಿಗಳಲ್ಲಿ ಸ್ಪಷ್ಟವಾಗಿ ಅಭಿವ್ಯಕ್ತಗೊಂಡಿದೆ ಎಂದು ವಿವರಿಸುತ್ತ ಭವಿಷ್ಯದಲ್ಲಿ ಉತ್ತಮ ಕಲಾವಿದರಾಗಿ ಬೆಳೆಯುವ ಎಲ್ಲ ಲಕ್ಷಣಗಳು ಇವರ ಕಲಾಕೃತಿಗಳಲ್ಲಿ ಬಿಂಬಿತವಾಗಿವೆ, ಭವಿಷ್ಯದಲ್ಲಿ ಎಲ್ಲರೂ ದೇಶದ ಸಾಂಸ್ಕೃತಿಕ ಆಸ್ತಿಯಾಗುವುದರಲ್ಲಿಸಂದೇಹವಿಲ್ಲ ಎಂದರು.

ವಿಭಾಗದ ಮುಖ್ಯಸ್ಥರು ಹಾಗೂ ಮಾನವಿಕ ಮತ್ತು ಭಾಷಾ ನಿಕಾಯದ ಡೀನರಾದ ಪ್ರೊ. ವಿಕ್ರಮ ವಿಸಾಜಿ ಅವರು ಮಾತನಾಡಿ, ಒಬ್ಬೊಬ್ಬರಲ್ಲಿ ಒಂದೊಂದು ಸಾಮರ್ಥ್ಯ ಅಡಗಿರುತ್ತದೆ ಅದು ಬಣ್ಣ, ನಾದ, ಕಲ್ಲು, ಕೊರಡು ಅಥವಾ ಶಬ್ಧಗಳ ಮೂಲಕ ಕಲಾಕೃತಿಗಳಾಗಿ ಹೊರಹೊಮ್ಮಿ, ಕಲಾವಿದರು ಮತ್ತು ನೋಡುಗರ ಹೃದಯಗಳೆರಡನ್ನೂ ಸಂಸ್ಕಾರಗೊಳಿಸುತ್ತವೆ. ದೇಶದ ಬೇರೆ ಬೇರೆ ಪ್ರದೇಶಗಳಿಂದ ಬಂದಿರುವ ಈ ಎಲ್ಲ ವಿದ್ಯಾರ್ಥಿಗಳು ಅತ್ಯಂತ ಪ್ರತಿಭಾಶಾಲಿಗಳಾಗಿದ್ದಾರೆ, ಇತ್ತೀಚಿಗೆ ಎಲ್ಲರೂ ಸೇರಿ ಕಲಬುರಗಿಯಲ್ಲಿ ಏರ್ಪಡಿಸಿದ್ದ ಕಲಾ ಪ್ರದರ್ಶನ ಅವಿಸ್ಮರಣೀಯವಾದುದು, ಮೊನ್ನೆ ಕೊಚ್ಚಿ ಬೈನಾಲೆ ಅಂತಾರಾಷ್ಟ್ರೀಯ ಕಲಪ್ರದರ್ಶನವನ್ನೂ ನೋಡಿ ಬಂದಿದ್ದಾರೆ ಎಂದು ಬಣ್ಣಿಸಿದರು.

ವಿಭಾಗದ ಅಧ್ಯಾಪಕರು ಮತ್ತು ಕಲಾ ಪ್ರದರ್ಶನದ ಸಂಯೋಜಕರು ಆಗಿರುವ ಡಾ. ಶಿವಾನಂದ ಬಂಟನೂರ ಮಾತನಾಡಿ 'ನಮ್ಮ ವಿದ್ಯಾರ್ಥಿಗಳಲ್ಲಿರುವ ವಿಶೇಷ ಆಸಕ್ತಿಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಿ ಅವರ ಆಸಕ್ತಿಗಳಿಗೆ ಅನುಗುಣವಾಗಿ ತರಬೇತಿ ನೀಡಲಾಗುತ್ತಿದ್ದು, ಒಟ್ಟು ಏಳು ಜನ ವರ್ಣಚಿತ್ರಕಲೆಯಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿದ್ದಾರೆ ಮತ್ತು ನಾಲ್ಕು ಜನ ವಿದ್ವಾಂಸರು ಪಿ ಎಚ್ ಡಿ ಅಧ್ಯಯನ ಮಾಡುತ್ತಿದ್ದಾರೆ, ವಿದ್ಯಾರ್ಥಿಗಳ ಕ್ರಿಯಾಶೀಲತೆ ಮತ್ತು ಸಾಧನೆ ಬಗ್ಗೆ ನನಗೆ ಹೆಮ್ಮೆ ಎನಿಸುತ್ತದೆ ಎಂದು ವಿವರಿಸಿದರು.

ಸಮಾರಂಭದಲ್ಲಿ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಆರಂಭದಲ್ಲಿ ಶಿವಾನಿ ರಾವತ್ ಹಾಗೂ ಶ್ವೇತಾ ದೂದಿ ಸ್ವಾಗತ ಗೀತೆ ಹಾಡಿದರು, ವಿಭಾಗದ ಅಧ್ಯಾಪಕ ವಿನಯಕುಮಾರ್ ಆರ್. ಕಾರ್ಯಕ್ರಮ ನಿರೂಪಿಸಿದರು, ಸಂಶೋಧನಾ ವಿದ್ಯಾರ್ಥಿ ಪ್ರಶಾಂತ ಕುವರ್ ವಂದಿಸಿದರು.

ಕಲಾ ಪ್ರದರ್ಶನದಲ್ಲಿ ವಿಭಾಗದ ಸಂಶೋಧನಾ ವಿದ್ವಾಂಸರಾದ ನಯನಬಾಬುರಾವ್, ಪ್ರಶಾಂತ್ ಕುಮಾರ್, ರಮೇಶ್ ಮೋತುಕುರಿ, ಅಶ್ವಿನಿ ರಾಜಶೇಖರ ಕಲ್ಯಾಣಿ, ಹಾಗೂ ಸ್ನಾತಕೋತ್ತರ ಪೇಂಟಿಂಗ್ ವಿದ್ಯಾರ್ಥಿಗಳಾದ ಶಿವಾನಿ ರಾವತ್, ಸಿತಾಂಶು ಮುಖರ್ಜಿ, ಲೆಂಕೆ ಗೀತಾ, ದಕ್ಷಿತಾ ಲಾಂಜೆವರ್, ಶ್ವೇತಾ ಶಿವಾನಿ, ಬಿ ಜಿ ಲಿಂಗಡೋ ಮೌಪಲಾಂಗ್, ಕುಮಾರ್ ಮುರುಳಿ ಅವರು ತಮ್ಮ ವರ್ಣ ಚಿತ್ರ ಮತ್ತು ಶಿಲ್ಪಕಲಾ ಕೃತಿಗಳನ್ನು ಪ್ರದರ್ಶನಕ್ಕೆ ಇಟ್ಟಿರುವರು. ಕಲಾ ಪ್ರದರ್ಶನವು 2ನೇ ಏಪ್ರಿಲ್ ಸಂಜೆ 5.30 ವರೆಗೆ ಇರುತ್ತದೆ.

# ಸಚಿವರ ಆಪ್ತ ಸಹಾಯಕರು ಕಾಮಗಾರಿ ನಿಲ್ಲಿಸಿಲ್ಲ; ಶ್ರೀಮಂತ ಗುತ್ತೇದಾರ



ಚಿತ್ತಾಪುರ: ಸ್ಥಳೀಯ ಕಾಂಗ್ರೆಸ್ ಮುಖಂಡರ ಮಾತು ಕೇಳಿ ಸಚಿವರ ಆಪ್ತ ಸಹಾಯಕರು ಕಾಮಗಾರಿ ನಿಲ್ಲಿಸಿಲ್ಲ, ಇದು ಸತ್ಯಕ್ಕೆ ದೂರ ಎಂದು ದಿಗ್ಗಾಂವ ಗ್ರಾಮದ ಕಾಂಗ್ರೆಸ್ ಮುಖಂಡರಾದ ಶ್ರೀಮಂತ ಗುತ್ತೇದಾರ, ಮಲ್ಲಿನಾಥ ಪಾಟೀಲ್, ಸುಭಾಶ್ಚಂದ್ರ ಪವಾರ್ ಹೇಳಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ದಿಗ್ಗಾಂವ ಗ್ರಾಮದಲ್ಲಿ ಅಲ್ಟ್ರಾಟೆಕ್ ಸಿಮೆಂಟ್ ಕಂಪೆನಿಯ ವತಿಯಿಂದ ಸಿಎಸ್'ಆರ್ ಅನಿದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಗುಣಮಟ್ಟದಿಂದ ಮಾಡದೇ ಸಂಪೂರ್ಣ ಕಳಪೆ ಮಟ್ಟದಲ್ಲಿ ನಡಿತಾ ಇದೆ. ಅದಕ್ಕೆ ಗುಣಮಟ್ಟದಿಂದ ಮಾಡಬೇಕೆನ್ನುವುದು ಗ್ರಾಮಸ್ಥರ ಆಗ್ರಹವಾಗಿದೆ. ಇದರಲ್ಲಿ ಕಾಂಗ್ರೆಸ್ ಮುಖಂಡರ ಹಾಗೂ ಸಚಿವರ ಆಪ್ತ ಸಹಾಯಕರಿಗೂ ಯಾವುದೇ ರೀತಿಯ ಸಂಬಂಧ ಇಲ್ಲ ಎಂದರು.

ಅಲ್ಟ್ರಾಟೆಕ್ ಸಿಮೆಂಟ್ ಕಂಪೆನಿಯವರು ದಿಗ್ಗಾಂವ ಗ್ರಾಮಕ್ಕೆ ಸಿಎಸ್'ಆರ್ ಅನುದಾನದಲ್ಲಿ ಗ್ರಾಮದ ಸರ್ವಾಗೀಂಣ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದು ಭರವಸೆ ನೀಡಿದರು, ಅದರಂತೆ ಗ್ರಾಮದಲ್ಲಿ ಅಭಿವೃದ್ಧಿ ಕಾಮಗಾರಿಗಳು ಕೈಗೊಂಡಿದ್ದಾರೆ. ಆದರೆ ಕಾಮಗಾರಿ ತಮ್ಮ ಮನಸ್ಸಿಗೆ ಬಂದ ಹಾಗೆ ಮಾಡಿದರೇ ಹೇಗೆ, ಗ್ರಾಮಸ್ಥರಾದ ನಾವು ಕಳಪೆ ಕಾಮಗಾರಿ ಮಾಡುವ ಬದಲು ಗುಣಮಟ್ಟದಿಂದ ಮಾಡಬೇಕು. ನಿವು ಮಾಡುತ್ತಿರುವ ಕಾಮಗಾರಿಯಿಂದ ಗ್ರಾಮದ ಅಭಿವೃದ್ಧಿಗೆ ಪೂರಕವಾಗಲಿದೆ. ಒಂದು ವೇಳೆ ನೀವು ಕಳಪೆ ಗುಣಮಟ್ಟದಿಂದ ಕಾಮಗಾರಿ ಮಾಡಿದರೇ ಮುಂದಿನ ದಿನಗಳಲ್ಲಿ ಅದು ಬಳಕೆಗೆ ಬರದೇ ಹೋದರೇ ಹೇಗೆ ಎಂದು ಪ್ರಶ್ನಿಸಿದರು.

ಕಂಪೆನಿಯ ಅಧಿಕಾರಿ ಸೋಮಶೇಖರ ಅವ–ರಿಗೆ ಕಾಮಗಾರಿಗಳು ಗುಣಮಟ್ಟದಿಂದ ನಡೆಯುತ್ತಿಲ್ಲ ಕಳಪೆ ಕಾಮಗಾರಿ ಮಾಡಲಾಗುತ್ತಿದೆ ಎಂದು ಗಮನಕ್ಕೆ ತಂದರೂ ಅವರು ನೀವು ಯಾರು ನಮಗೆ ಕೇಳುವವರು ಎಂದು ಹೇಳುತ್ತಾರೆ. ಗ್ರಾಮಸ್ಥರಿಗೆ ಬೇಕಾಗಿರುವುದು ಗುಣಮಟ್ಟದ ಕಾಮಗಾರಿ ಅದು ಬಿಟ್ಟು ಕಳಪೆ ಕಾಮಗಾರಿ ಮಾಡುವುದಾರೇ ಅದು ಯಾವ ಪ್ರಯೋಜನವೇ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರು ತಾಲೂಕಿನ ಸರ್ವಾಂಗಿಣ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಅದರಂತೆ ಅವರು ಗುಣಮಟ್ಟದ ಕಾಮಗಾರಿಗೆ ಹೆಚ್ಚಿನ ಒತ್ತು ನೀಡುತ್ತಾರೆ. ಅದರಂತೆ ಗ್ರಾಮಸ್ಥರಾದ ನಾವು ಕೂಡ ಗುಣಮಟ್ಟದ ಕಾಮಗಾರಿಗಳಿಗೆ ಹೆಚ್ಚಿನ ಒತ್ತು ನೀಡುತ್ತೇವೆ ಎಂದರು.

ಅಲ್ಟ್ರಾಟೆಕ್ ಸಿಮೆಂಟ್ ಕಂಪೆನಿಯವರು ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶೌಚಾಲಯ, ಸಣ್ಣ ಹಳ್ಳದ ಬ್ರಿಡ್ಜ್ ಹತ್ತಿರ ಮಹಿಳಾ ಶೌಚಾಲಯ, ಬಾವಿ ಹೂಳೆತ್ತುವ ಕಾಮಗಾರಿ, ಶುದ್ಧ ಕುಡಿಯುವ ನೀರಿನ ಘಟಕ ಸೇರಿದಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸುತ್ತಿದ್ದಾರೆ. ಆದರೆ ಅವಗಳೆಲ್ಲ ಕಳಪೆ ಗುಣಮಟ್ಟದಿಂದ ನಡೆಯುತ್ತಿದ್ದು, ಗುಣಮಟ್ಟದಿಂದ ನಡೆಯಬೇಕೆನ್ನುವುದು ನಮ್ಮ ಆಗ್ರಹವಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಜಗನ್ನಾಥ ಸೀದಾ, ಜಗನ್ನಾಥ ಇಟಗಾ, ಮಲ್ಲಿನಾಥ ಕುಕನೂರ ಸೇ–ರಿದಂತೆ ಇತರರು ಇದ್ದರು.

# ಕಂಬಳೇಶ್ವರ ಶ್ರೀಗಳ ಜನ್ಮ ದಿನೋತವ ಪ್ರಯುಕ್ತ ಉಚಿತ ನೇತ್ರ ತಪಾಸಣೆ

ಚಿತ್ತಾಪುರ: ಪಟ್ಟಣದ ಕಂಬಳೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಸೋಮಶೇಖರ ಶಿವಾಚಾರ್ಯರ 59 ನೇ ಜನ್ಮದಿನದ ಪ್ರಯುಕ್ತ ವೇದಾ ಕಣ್ಣಿನ ಆಸ್ಪತ್ರೆ ಯಾದಗಿರಿ ಮತ್ತು ದೃಷ್ಟಿ ಕಣ್ಣಿನ ಆಸ್ಪತ್ರೆ ಕಲಬುರಗಿ ಇವರ ಸಹಯೋಗದೊಂದಿಗೆ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ ಶಿಬಿರ ಮತ್ತು ಉಚಿತ ಕನ್ನಡಕ ವಿತರಣೆ ಕಾರ್ಯಕ್ರಮವನ್ನು ಕಂಬಳೇಶ್ವರ ಕಲ್ಯಾಣ ಮಂಟಪದಲ್ಲಿ ಏಪ್ರಿಲ್ 4 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಆಯೋಜಕರಾದ ಮಲ್ಲು ಇಂದೂರ, ನಾಗರೆಡ್ಡಿ ಗೋಪಸೇನ್ ಅವರು ಹೇಳಿದರು.

ಪಟ್ಟಣದ ಕಂಬಳೇಶ್ವರ ಮಠದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ ಶಿಬಿರ ಮತ್ತು ಉಚಿತ ಕನ್ನಡಕ ವಿತರಣೆ ಕಾರ್ಯಕ್ರಮ ನಡೆಯಲಿದ್ದು, ಸಂಜೆ 5 ಗಂಟೆಗೆ ಕಂಬಳೇಶ್ವರ ಶ್ರೀಗಳ ಜನ್ಮ ದಿನೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.




**ಕಲಬುರಗಿ: ನಗರದ ಇಂದಿರಾ ಸ್ಮಾರಕ ಭವನದಲ್ಲಿ ಮಹಾನಗರ ಪಾಲಿಕೆಯ ವಿಶೇಷ ಮುಂಗಡ 2026–27ನೇ ಸಾಲಿನ ಅಂದಾಜು ಆಯವ್ಯಯ ಬಜೆಟ್ ಅನುಮೋದನೆ ಸಭೆ ಮೇಯರ ವರ್ಷಾ ರಾಜೀವ ಜಾನೆ ಅಧ್ಯಕ್ಷತೆಯಲ್ಲಿ ಜರುಗಿತು. ಹಣಕಾಸು ಸಮಿತಿ ಸದಸ್ಯೆ ಅನುಪಮಾ ರಮೇಶ ಕಮಕನೂರ, ಉಪಮೇಯರ ತೃಪ್ತಿ ಲಾಖೆ, ಪಾಲಿಕೆಯ ಆಯುಕ್ತರಾದ ಅವಿನಾಶ ಜಾ.ಸಿಂಧೆ ಮತ್ತು ಪಾಲಿಕೆ ವಿರೋಧ ಪಕ್ಷದ ನಾಯಕಿ ಶೋಭಾ ಗುರುರಾಜ ದೇಸಾಯಿ ಹಾಗೂ ಪಾಲಿಕೆ ಸದಸ್ಯರು ಉಪಸ್ಥಿತರಿದ್ದರು.**

# ಸ್ವಯಂ ಗಣತಿ ಕಾರ್ಯಕ್ರಮಕ್ಕೆ ಮೇಯರ್: ಉಪ ಮೇಯರ್ ಚಾಲನೆ

## ಸ್ವಯಂ ಗಣತಿ ಮಾಡಿಕೊಳ್ಳಲು ನಾಗರಿಕರಿಗೆ ಮೇಯರ್ ಎಂ. ಎಸ್. ಕರಡಿ ಮನವಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಮ್ಮ ಜನಗಣತಿ, ನಮ್ಮ ಭವಿಷ್ಯ ಧ್ಯೇಯವಾಕ್ಯದಡಿ ದೇಶ ವ್ಯಾಪಿ ನಡೆಯಲಿರುವ ರಾಷ್ಟ್ರೀಯ ಜನಗಣತಿ 2027 ರ ಮೊದಲ ಹಂತದ ಸ್ವಯಂ ಗಣತಿ ಕಾರ್ಯಕ್ಕೆ ಇಲ್ಲಿನ ಮಹಾನಗರ ಪಾಲಿಕೆಯ ಮೇಯರ್ ಮಡಿವಾಳಪ್ಪ ಕರಡಿ ಹಾಗೂ ಉಪಮೇಯರ್ ಸುಮಿತ್ರಾ ಜಾಧವ ಬುಧವಾರ ಚಾಲನೆ ನೀಡಿದರು.

ಮೇಯರ್ ಮಡಿವಾಳಪ್ಪ ಕರಡಿ ಅವರು ತಮ್ಮ ಸ್ವಯಂ ಗಣತಿ ಮಾಡುವುದರ ಮೂಲಕ ನಗರ ವ್ಯಾಪ್ತಿಯಲ್ಲಿ ಸ್ವಯಂ ಗಣತಿ ಕಾರ್ಯಕ್ಕೆ ಚಾಲನೆ ನೀಡಿ, ನಗರದ ಜನತೆ ಸ್ವಯಂ ಗಣತಿ ಮಾಡಿಕೊಳ್ಳಲು ಕರೆ ನೀಡಿದರು.

ರಾಷ್ಟ್ರೀಯ ಜನಗಣತಿ 2027ರ ಮೊದಲ ಹಂತದ ಎಚ್ ಎಲ್ ಒಗೆ ಸಂಬಂಧಿಸಿದಂತೆ ಏ. 01ರಿಂದ 15 ರ ವರೆಗೆ ದತ್ತಾಂಶ ಆಧಾರಿತ ಸ್ವಯಂ ಗಣತಿ ಕಾರ್ಯವನ್ನು ನಗರದ ನಾಗರಿಕರು ತಮ್ಮ ಕುಟುಂಬದ ಸ್ವಯಂ ಗಣತಿ ಮಾಡಿಕೊಳ್ಳುವ ಮೂಲಕ ಜನಗಣತಿ ಕಾರ್ಯಕ್ಕೆ ಅಧಿಕಾರಿಗಳಿಗೆ ಸಹಕಾರ ನೀಡಬೇಕು ಎಂದರು.

ಇದೇ ವೇಳೆ ಉಪಮೇಯರ್ ಸುಮಿತ್ರಾ ಜಾಧವ ಅವರು ಕೂಡಾ ಸ್ವಯಂ ಗಣತಿ ಮಾಡಿಕೊಳ್ಳುವುದರ ಮೂಲಕ ಗಣತಿ ಕಾರ್ಯಕ್ಕೆ ಸಾಕ್ಷಿಯಾದರು.

ನಗರದ ಹೆಚ್ಚುವರಿ ಜನಗಣತಿ ಅಧಿಕಾರಿ ಶಿಲ್ಪಶ್ರೀ ಸಾಗರ, ಅಂಬಿಕಾ ಕಾಂಬಳೆ ಹಾಗೂ ಪಾಲಿಕೆ ಸಿಬ್ಬಂದಿ ಉಪಸ್ಥಿತರಿದ್ದರು.

# ಯಲಗೂರ ದೇವಸ್ಥಾನದಲ್ಲಿ ಸಡಗರದ ಹನುಮ ಜಯಂತಿ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಸಮೀಪದ ಸುಕ್ಷೇತ್ರ ಯಲಗೂರದ ದೇವಸ್ಥಾನದಲ್ಲಿ ಸಡಗರದಿಂದ ಬುಧವಾರ ಹನುಮ ಜಯಂತಿ ಆಚರಿಸಲಾಯಿತು.

ಬೆಳಗ್ಗೆ ಉತ್ಸವ ಮೂರ್ತಿಯನ್ನು ನೂರಾರು ಭಕ್ತರು ಸಕಲ ವಾದ್ಯಗಳೊಂದಿಗೆ ಕೃಷ್ಣಾ ನದಿಗೆ ತೆರಳಿ ಗಂಗಾಪೂಜೆ ಸಲ್ಲಿಸಿ ನಂತರ ದೇವಸ್ಥಾನಕ್ಕೆ ತರಲಾಯಿತು. ಮೂರ್ತಿಯನ್ನು ತೊಟ್ಟಿಲಲ್ಲಿ ಹಾಕಲಾಯಿತು.

ಯಲಗೂರೇಶನಿಗೆ ಸಾಮೂಹಿಕ ಪಂಚಾಮೃತ ಅಭಿಷೇಕ ಜರುಗಿತು.

ವಿಠ್ಠಲಾಚಾರ್ಯ ಗದ್ದನಕೇರಿ ತೊಟ್ಟಿಲು ಪೂಜೆ ಹಾಗೂ ಪವಮಾನ ಹೋಮ ನೆರವೇರಿಸಿದರು.

ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಅನಂತ ಓಂಕಾರ, ಅನ್ನದಾಸೋಹ ಸಮಿತಿ ಅಧ್ಯಕ್ಷ ಶ್ಯಾಮ ಪಾತರದ, ಗೋಪಾಲ ಗದ್ದನಕೇರಿ, ಕೃಷ್ಣ ಕಟ್ಟಿ, ಪಾಂಡುರಂಗಾಚಾರ್ಯ ಹೊಸೂರ, ಸಂತೋಷ ಪೂಜಾರ, ಯಲಗೂರದಪ್ಪ ಪೂಜಾರ, ಸಂಜೀವ ಪೂಜಾರ, ಆನಂದ ಪೂಜಾರ, ಎಸ್. ಐ.ಡೆಂಗಿ ಮತ್ತೀತರರು ಇದ್ದರು.

ಚೆನ್ನಿಗಾವಿ ಬಂಧುಗಳು ಅನ್ನಪ್ರಸಾದದ ವ್ಯವಸ್ಥೆ ಮಾಡಿದ್ದರು. ಹನುಮ ಜಯಂತಿ ಅಂಗವಾಗಿ 1000 ಮಾವಿನ ಹಣ್ಣುಗಳಿಂದ ಹನುಮನಿಗೆ ಅಲಂಕಾರ ಮಾಡಲಾಗಿತ್ತು.

# ಗ್ರಾಮೀಣಾಭಿವೃದ್ಧಿ ಯೋಜನೆಗಳ ಜಾರಿ ವೇಗ ಹೆಚ್ಚಿಸಿ



ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮ ಪಂಚಾಯಿತಿಗಳಲ್ಲಿ ನಡೆಯುತ್ತಿರುವ ತೆರಿಗೆ ಸಂಗ್ರಹಣಾ ಪ್ರಗತಿ ಶೇ.100 ರಷ್ಟು ಸಾಧಿಸಬೇಕು. ಗುರಿ ಸಾಧನೆಯಲ್ಲಿ ಹಿಂದುಳಿದ ಪಂಚಾಯಿತಿಗಳು ತಕ್ಷಣವೇ ಕಾರ್ಯಪ್ರವೃತ್ತರಾಗಿ ಪ್ರಗತಿ ಸಾಧಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಹೇಳಿದರು.

ವಿಜಯಪುರ ತಾಪಂ ಸಭಾಭವನದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳ ಕುರಿತು ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಿಗೆ ಸಂಬಂಧಿಸಿದ ಸಾಮಗ್ರಿ ಹಣ ಪಾವತಿ, ಬಾಕಿ ಪ್ರಕರಣಗಳ ಬಗ್ಗೆ ಪರಿಶೀಲನೆ ನಡೆಸಿ, ಬಾಕಿ ಪಾವತಿಗಳನ್ನು ತ್ವ-ರಿತವಾಗಿ ಪಾವತಿ ಮಾಡಿ ಕಾಮಗಾರಿಗಳ ನಿರಂತರತೆ ಕಾಯ್ದುಕೊಳ್ಳಬೇಕು ಎಂದರು. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ಮಾಡುತ್ತಿರುವ ಕೂಲಿಕಾರರ ಇ-ಕೆವೈಸಿ ಪ್ರಕ್ರಿಯೆಯ ಪ್ರಗತಿಯು ನಿರೀಕ್ಷಿತವಾಗಿಲ್ಲ. ಆದ-ದ್ದರಿಂದ ಎಲ್ಲ ಕೂಲಿಕಾರರ ಇ-ಕೆವೈಸಿಯನ್ನು ಶೇ. 100ರಷ್ಟು ಪೂರ್ಣಗೊಳಿಸಬೇಕು. ಅದೇ ರೀತಿ, ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಕ್ರಮ ಕೈಗೊಳ್ಳಲು ಎಲ್ಲ ಗ್ರಾಮ ಪಂಚಾಯತಿ ಪಿಡಿಒಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈಗಾಗಲೇ ಬೇಸಿಗೆ ಆರಂಭವಾಗಿರುವುದ-ರಿಂದ, ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಎಲ್ಲ ಗ್ರಾಮಗಳಿಗೂ ಸಮರ್ಪಕ ಕುಡಿಯುವ ನೀರಿನ ಪೂರೈಕೆ ಮಾಡಬೇಕು ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಪಂನ ಸಹಾಯಕ ನಿರ್ದೇಶಕರು(ಗ್ರಾ.ಉ) ಎಸ್. ಆರ್. ಕಟ್ಟಿ, ತಾಲೂಕಿನ ಎಲ್ಲ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಂಯೋಜಕರು ಉಪಸ್ಥಿತರಿದ್ದರು.

# ಸಂಭ್ರಮದ ನಾಗಾವಿ ಯಲ್ಲಮ್ಮ ಜಾತ್ರಾ ಮಹೋತ್ಸವ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ಪಟ್ಟಣದ ಇಂಗಳೇಶ್ವರ ರಸ್ತೆಯಲ್ಲಿರುವ ನಾಗಾವಿ ಯಲ್ಲಮ್ಮದೇವಿ ಜಾತ್ರಾಮಹೋತ್ಸವ ಬುಧವಾರ ಸಂಭ್ರಮ, ಸಡಗರದಿಂದ ಜರುಗಿತು. ಜಾತ್ರೆಯಂಗವಾಗಿ ಪಲ್ಲಕ್ಕಿ ಉತ್ಸವದ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ವಿವಿಧೆಡೆಗಳಿಂದ ಆಗಮಿಸಿದ್ದ ತಾಯಿಜೋಗಮ್ಮರ ಕುಣಿತ, ವಿವಿಧ ವಾದ್ಯ ಮೇಳದೊಂದಿಗೆ ಸಂಭ್ರಮದಿಂದ ಜರುಗಿತು.

ನಾಗಾವಿ ಯಲ್ಲಮ್ಮ ದೇವಸ್ಥಾನದಿಂದ ಐದು ಕಳಸ ಹಾಗೂ ಪಲ್ಲಕ್ಕಿ ಉತ್ಸವವು ಪಟ್ಟಣದ ಬಸವೇಶ್ವರ ವೃತ್ತ, ಅಗಸಿ, ಮಹಾರಾಜರ ಮಠದ ಮಾರ್ಗ, ಬಸವಜನ್ಮ ಸ್ಮಾರಕ ಮಾರ್ಗ, ವಿಜಯಪುರ ಮಾರ್ಗವಾಗಿ ಪುನಃ ಬಸವೇಶ್ವರ ವೃತ್ತಕ್ಕೆ ಬಂದು ಬಸವೇಶ್ವರ ದೇವಸ್ಥಾನದ ಬಸವತೀರ್ಥ ಭಾವಿಗೆ ಆಗಮಿಸಿದ ನಂತರ ಗಂಗಾಸ್ಥಳ ಮಾಡಿಕೊಂಡ ನಂತರ ಡೊಳ್ಳು, ಚೌಡಕಿ ಸೇರಿದಂತೆ ಸುಮಂಗಲೆಯರ ಆರತಿಯೊಂದಿಗೆ ಬಸವೇಶ್ವರ ವೃತ್ತದ ಮಾರ್ಗವಾಗಿ ಇಂಗಳೇಶ್ವರ ರಸ್ತೆಯಲ್ಲಿರುವ ಯಲ್ಲಮ್ಮದೇವಿ ದೇವಸ್ಥಾನಕ್ಕೆ ಕಳಸಗಳು, ನಾಗಾವಿ ಯಲ್ಲಮ್ಮದೇವಿ ಪಲ್ಲಕ್ಕಿ ಉತ್ಸವ ತಲುಪಿತು. ಕಳಸಗಳಿಗೆ ಪೂಜೆ ನೆರವೇರಿಸಿದ ನಂತರ ದೇವಸ್ಥಾನಕ್ಕೆ ಕಳಸಗಳನ್ನು ಏರಿಸಲಾಯಿತು. ದೇವಸ್ಥಾನದಲ್ಲಿ ವಿಶೇಷ ಪೂಜೆ ಜರುಗಿತು.

ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಪಲ್ಲಕ್ಕಿ ಉತ್ಸವದ ಮೆರವಣಿಗೆಯಲ್ಲಿ ಜೋಗಮ್ಮರಾದ ಲಕ್ಷ್ಮೀ ಬಾಗೇವಾಡಿ, ಶರಣವ್ವ ಇಂಗಳೇಶ್ವರ, ಅಕ್ಷತಾ ಬೆಳಗಲ್ಲ, ಕವಿತಾ ಮುದ್ದೇಬಿಹಾಳ, ಯಲ್ಲವ್ವ ಟಕ್ಕಳಕಿ, ಜಾತ್ರಾ ಮಹೋತ್ಸವದ ಮುಖಂಡರಾದ ಬಸಣ್ಣ ದೇಸಾಯಿ, ಚಂದ್ರಶೇಖರ ಕಲ್ಲೂರ, ಅಪ್ಪಾಸಾಹೇಬ ಕಲ್ಲೂರ, ಅಶೋಕ ಗೌರನವರ, ಹಣಮಂತ ನಾಯ್ಕೋಡಿ, ಮಲ್ಲಪ್ಪ ಚಿಕ್ಕೂರ, ರಾಮಣ್ಣ ಕಲ್ಲೂರ, ಚನ್ನಪ್ಪ ಕಲ್ಲೂರ, ವೆಂಕಟೇಶ ಕರಾಡೆ, ಬಸವರಾಜ ಬನಾಶಿ, ಶರಣು ಗುಡ್ಡದ, ಮಲ್ಲು ಶೀಕಳವಾಡಿ, ಕೃಷ್ಣ ಪವಾರ, ಕಾಶೀನಾಥ ಮಸಬಿನಾಳ, ಶರಣು ಕೂಡಗಿ, ಲಕ್ಷ್ಮೀ ವಡಗೇರ, ರೇಣುಕಾ ಬಿರಾದಾರ ಸೇರಿದಂತೆ ಇತರರು ಭಾಗವಹಿಸಿದ್ದರು.

ಸಂಜೆ ಜಾತ್ರೆಯಂಗವಾಗಿ ವಿವಿಧ ಕಲಾವಿದರು ಚೌಡಕಿ ಪದಗಳನ್ನು ಹಾಡಿದರು.

# ಅಕ್ರಮ ವಾಣಿಜ್ಯ ಮಳಿಗೆ-ಮನೆಗಳ ಮೇಲೆ ಕ್ರಮಕ್ಕೆ ಕರವೇ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಅನುಮತಿ ಪಡೆಯದೇ ನಿರ್ಮಾಣ ಮಾಡಿದ ವಾಣಿಜ್ಯ ಮಳಿಗೆ, ಮನೆ ನಿರ್ಮಾಣ ಮಾಡುತ್ತಿರುವ ಕೆಲ ವ್ಯಾಪಾ-ರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರವನ್ನು ಕರವೇ ಕಾರ್ಯಕರ್ತರು ತಹಸೀಲ್ದಾರ ಮೂಲಕ ಬುಧವಾರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ಮಾತನಾಡಿ, ಪಟ್ಟಣದ ರಾಜ್ಯ ಬಿಜ್ಜಳ ರಾಜ್ಯ ಹೆದ್ದಾ-ರಿಯಲ್ಲಿರುವ ಬಸ್ ನಿಲ್ದಾಣ ಸಮೀಪ ಲೋಕನಾಥ ನೇಮಿಚಂದ ಅಗರವಾಲ ಅವರು ನಿಯಮ ಬಾಹಿರವಾಗಿ ಐದು ಅಂತಸ್ತಿನ ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಿದ್ದಾರೆ. ಪುರಸಭೆಯಿಂದ ಯಾವುದೇ ಅನುಮತಿ (ಪರವಾನಿಗೆ) ಪಡೆಯದೇ ವಾಣಿಜ್ಯ ಮಳಿಗೆ ಮುಂದೆ ಅವೈಜ್ಞಾನಿಕವಾಗಿ ವಿದ್ಯುತ್ ಪರಿವರ್ತಕ ಅಳವಡಿಸಿದ್ದಾರೆ. ಇದು ಸಾರ್ವಜನಿಕ-ರಿಗೆ ಅಪಾಯವಾಗುವ ಸಂಭವವಿದೆ. ಇವರದೇ ಸಿಟಿಎಸ್ ನಂ. 342 ರಲ್ಲಿ ಸಂಪೂರ್ಣ ಸರ್ಕಾರಿ ಉದ್ಯಾನವನ ಜಾಗೆಯಲ್ಲಿ ಕಟ್ಟಡ ನಿರ್ಮಾಣ ಮಾಡಿಕೊಂಡಿದ್ದಾರೆ. ಇನ್ನೊಬ್ಬರು ವಿಜಯಪುರ ರಸ್ತೆಯಲ್ಲಿರುವ ಸರ್ಕಾರಿ ಜಾಗೆಯನ್ನು ಅಕ್ರಮವಾಗಿ ಕಬಳಿಕೆ ಮಾಡಿಕೊಂಡು ಅಲ್ಲಿದ್ದ ಬಾವಿಯನ್ನು ತೆರವು ಗೊಳಿಸಿ ಕಟ್ಟಡ ನಿರ್ಮಾಣ ಮಾಡಲು ಹೊರಟಿದ್ದಾರೆ. ವಿಜಯಪುರ ರಸ್ತೆಯಲ್ಲಿರುವ ಸಿಟಿಎಸ್ ನಂ.344 ರಲ್ಲಿಯೂ ಪುರಸಭೆಯಿಂದ ಅನುಮತಿ ಪಡೆಯದೇ ಕಟ್ಟಡವನ್ನು ನಿರ್ಮಾಣ ಮಾಡುತ್ತಿದ್ದಾರೆ. ಸಿ.ಟಿ.ಎಸ್.ನಂ-2005, 2006, 2007, 2008 ಹಾಗೂ 2009 ಅನಧಿಕೃತವಾಗಿ ಪುರಸಭೆಯ ಅನುಮತಿ ಇಲ್ಲದೇ ಕಟ್ಟಡ ಮಾಡಿರುತ್ತಾರೆ. ಸರ್ವೆ ನಂ-361 ಮೋಹನ ಗಣಪತಿಲಾಲ ಅಗರವಾಲ ಇವರು ಎನ್.ಎ. ಪ್ಲಾಟ ಮಾಡಿಕೊಂಡಿದ್ದು. ಮಹಾಂತೇಶ್ವರಿ ನಗರದಲ್ಲಿ ಯಾವುದೇ ಅಭಿವೃದ್ಧಿ ಪಡಿಸದೇ ಪುರಸಭೆಗೆ ಹಸ್ತಾಂತರಿಸದೇ ವಂಚನೆ ಮಾಡಿದ್ದಾರೆ. ಈ ಕೂಡಲೇ ಸರಕಾರಕ್ಕೆ ವಂಚನೆ ಮಾಡಿದವರ ಮೇಲೆ ಜಿಲ್ಲಾಧಿಕಾರಿಗಳು ವಂಚನೆ ಪ್ರಕರಣ ದಾಖಲಿಸಿ ಎಷ್ಟು ವರ್ಷದಿಂದ ತೆರಿಗೆ ಕಟ್ಟಿಲ್ಲವೋ ಅದರ ದುಪ್ಪಟ್ಟು ಹಣವನ್ನು ಅವರಿಂದ ಭರಣ ಮಾಡಿಸುವಂತಹ ಕೆಲಸವನ್ನು ಮಾಡಬೇಕೆಂದು ಆಗ್ರಹಿಸಿದ ಅವರು, ಯಾವುದೇ ಕಾನೂನು ಕ್ರಮ ಜರುಗಿಸದೇ ಹೋದರೆ ಕರವೇ ಹೋರಾಟಕ್ಕೆ ಮುಂದಾಗುತ್ತದೆ ಎಂದರು.

ಮನವಿ ಪತ್ರವನ್ನು ಪ್ರಭಾರಿ ತಹಸೀಲ್ದಾರ ಎ.ಡಿ.ಅಮರವಾಡಗಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ದಯಾನಂದ ಸಾರವಾಡ, ಸೀತಾರಾಮ ಭಜಂತ್ರಿ, ಹಣಮಂತ ಟಕ್ಕಳಕಿ,ರವಿ ವಡ್ಡರ,ಸುರೇಶ ಬೇವಿನಗಿಡದ, ರಾಜು ವಡ್ಡರ,ಗಣೇಶ ಗಾಯಕವಾಡ,ರಾಜು ದಡ್ಡಿ ಇತರರು ಇದ್ದರು.

# ನೀರನ್ನು ಮಿತವಾಗಿ ಬಳಕೆ ಮಾಡಬೇಕು: ನ್ಯಾ. ಅಮೀತ ಘಟ್ಟಿ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ನೀರಿಲ್ಲದೆ ಜೀವವಿಲ್ಲ. ನಾಗ-ರಿಕತೆಗಳು ನೀರು ಇದ್ದಲ್ಲಿಯೇ ಬೆಳೆದು ಬಂದಿದ್ದನ್ನು ಇತಿಹಾಸದ ಪುಟಗಳಿಂದ ತಿಳಿದುಕೊಳ್ಳುತ್ತೇವೆ. ಪ್ರತಿಯೊಬ್ಬರೂ ನೀರಿನ ಮಹತ್ವ ಅರಿತು ಮಿತವಾಗಿ ಬಳಕೆ ಮಾಡಬೇಕೆಂದು ಪ್ರಧಾನ ಸಿವ್ಹಿಲ್ ನ್ಯಾಯಾಧೀಶ ಅಮೀತ ಘಟ್ಟಿ ಹೇಳಿದರು.

ತಾಲೂಕಿನ ಮುತ್ತಗಿ ಗ್ರಾಮ ಪಂಚಾಯತಿಯ ಸಭಾಂಗಣದಲ್ಲಿ ತಾಲೂಕ ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ತಾಲೂಕಾಡಳಿತ ಹಾಗೂ ತಾಲೂಕ ಪಂಚಾಯತಿ ಕಾರ್ಯಾಲಯ ಸಹಯೋಗದಲ್ಲಿ ವಿಶ್ವ ಜಲ ದಿನಾಚರಣೆಯಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಕಲ ಜೀವರಾಶಿಗಳಿಗೂ ನೀರು ಬೇಕು. ನಮ್ಮ ಉಳಿವಿಗೆ ಆಹಾರ, ಗಾಳಿ ಎಷ್ಟು ಮುಖ್ಯವೋ ಅಷ್ಟೇ ನೀರು ಸಹ ಮುಖ್ಯವಾಗಿದೆ. ನೀರು ಪೋಲು, ಹವಾಮಾನ ಬದಲಾವಣೆ ಸೇರಿದಂತೆ ವಿವಿದ ಕಾರಣಗಳಿಂದ ನೀರಿನ ಕೊರತೆ ಹೆಚ್ಚಾಗುತ್ತಿದೆ. ಇದು ಕೈಗಾರಿಕೆ, ಕೃಷಿ ಮತ್ತು ಆರ್ಥಿಕತೆಯ ಮೇಲೆ ಪ್ರಭಾವ ಬೀರುತ್ತದೆ. ಸಿಹಿನೀರಿನ ಮೂಲಗಳನ್ನು ಕಾಪಾಡುವ ಮೂಲಕ ಮುಂದಿನ ಜನಾಂಗಕ್ಕೆ ನೀರನ್ನು ಉಳಿಸಬೇಕಿದೆ. ನೀರಿನ ಮೂಲಗಳನ್ನು ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ನ್ಯಾಯವಾದಿ ಬಿ.ಪಿ.ಪತ್ತಾರ ಅವರು ಉಪನ್ಯಾಸ ನೀಡಿ ಮಾತನಾಡಿದ ಅವರು, ನೀರನ್ನು ಮಿತವಾಗಿ ಬಳಸಬೇಕು. ಬೇಸಿಗೆಯ ದಿನದಲ್ಲಿ ತಣ್ಣನೆ ನೀರನ್ನು ಹಾಗೂ ಹೆಚ್ಚು ನೀರನ್ನು ಸೇವಿಸಬೇಕು. ಶುದ್ಧ ಕುಡಿಯುವ ನೀರನ್ನು ಬಳಸಬೇಕು.ತಗ್ಗು ದಿನ್ನೆಗಳಲ್ಲಿ ನೀರನ್ನು ಸಂಗ್ರಹಣೆ ಮಾಡುವುದು ಕಡಿಮೆ ಮಾಡಿ ಅವುಗಳಿಂದ ಉಂಟಾಗುವ ಮಾರಣಾಂತಿಕ ಕಾಯಿಲೆಗಳಿಂದ ಸುರಕ್ಷಿತರಾಗಬೇಕು. ನೀರಿನ ಮಹತ್ವ ಕುರಿತು ಹೇಳಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲೀಕರಣ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವ್ಹಿ.ಬಿ.ಗೊಂಗಡಿ, ಅಧ್ಯಕ್ಷತೆ ವಹಿಸಿದ್ದ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ ಮಾತನಾಡಿದರು.

ಕಾರ್ಯಕ್ರಮದಲ್ಲಿ ಒಂದನೇ ಸಿವ್ಹಿಲ್ ನ್ಯಾಯಾಧೀಶ ಈರಪ್ಪ ಢವಳೇಶ್ವರ, ಸಹಾಯಕ ಸರ್ಕಾರಿ ಅಭಿಯೋಜಕಿ ರಾಜರಾಜೇಶ್ವರಿ ಸುತ್ತಾರ, ಉಪತಹಸೀಲ್ದಾರ ಸೋಮಶೇಖರ ತಾವರಖೇಡ, ಸಹಾಯಕ ಕೃಷಿ ನಿರ್ದೇಶಕ ಎಂ.ಎಚ್.ಯರಝರಿ, ಕೂಡಗಿ ಪೊಲೀಸ್ ಠಾಣೆಯ ಪಿಎಸೈ ವ್ಹಿ.ಎಚ್.ಹತ್ತಳ್ಳಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮಂಜುಳಾ ಹಿರೇಮನಿ, ಹಿರಿಯ ನ್ಯಾಯವಾದಿ ವ್ಹಿ.ಬಿ.ಮರ್ತೂರ, ಗ್ರಾಮ ಪಂಚಾಯಿತಿ ಪಿಡಿಓ ಡಿ.ಎಂ.ಬಿಳೆಕುದರಿ ಇತರರು ಇದ್ದರು. ತಾಲೂಕು ಪಂಚಾಯಿತಿಯ ತಾಲೂಕು ಯೋಜನಾಧಿಕಾರಿ ಎಂ.ಬಿ.ಸೊನ್ನದ ಸ್ವಾಗತಿಸಿ, ನಿರೂಪಿಸಿದರು.

# ತುರ್ತು ದುರಸ್ಥಿಗೆ ಕಾದಿರುವ ಸಿಂದಗಿ ಸಾರ್ವಜನಿಕ ಗ್ರಂಥಾಲಯ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ನಗರದ ಶ್ರೀ ಚೆನ್ನವೀರ ಸ್ವಾಮೀಜಿ ಬಸ್ ನಿಲ್ದಾಣದ ಎದುರಿಗಿರುವ ಸಾರ್ವಜನಿಕ ಗ್ರಂಥಾಲಯ ಮೇಲ್ಛಾವಣಿ ಕಟ್ಟಡದ ಸಿಮೆಂಟ್ ಪದರು ಕುಸಿದು ಬಿದ್ದಿದೆ.

ನಗರದ ಸಾರ್ವಜನಿಕ ಗ್ರಂಥಾಲಯ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದ ಕಾರಣ ಸಿಮೆಂಟ್ ಪದರು ಉದುರಿ ಕೆಳಗಡೆ ಬಿದ್ದಿದೆ. ಇದರಿಂದ ಅಲ್ಲಿದ್ದ ಸಾಮಗಿಗಳು ಹಾಳಾಗಿದ್ದು, ಅದೃಷ್ಟವಶಾತ್ ಅಲ್ಲಿ ಓದುಗರು ಯಾರು ಇಲ್ಲದ ಕಾರಣ ಯಾರಿಗೂ ಯಾವುದೇ ರೀತಿಯ ಹಾನಿ ಉಂಟಾಗಿಲ್ಲ. ಇನ್ನಾದರೂ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಇತ್ತ ಗಮನ ಹರಿಸಿ ಹೈಟೆಕ್ ಗ್ರಂಥಾಲಯ ನಿರ್ಮಿಸಬೇಕು ಎಂಬುದು ಓದುಗರ ಆಶಯವಾಗಿದೆ.

ಈ ಘಟನೆಯ ಕುರಿತು ನಮ್ಮ ಪ್ರತಿನಿಧಿಯೊಂದಿಗೆ ಮಾತನಾಡಿದ ಗ್ರಂಥಾಲಯದ ಸಹವರ್ತಿ ರಾಜಶೇಖರ ಹತ್ತರಕಿ, ಗ್ರಂಥಾಲಯ ದುರಸ್ತಿಯ ಬಗ್ಗೆ ಮೇಲಾಧಿಕಾ-ರಿಗಳಿಗೆ ಅನೇಕ ಬಾರಿ ವರದಿ ಸಲ್ಲಿಸುತ್ತಲೇ ಬಂದಿದ್ದೇವೆ. ರಾಜ್ಯಸಭಾ ಸದಸ್ಯೆ ಸುಧಾಮೂರ್ತಿ ಅವರು ನಮ್ಮ ಮೇಲಾಧಿಕಾರಿಗಳಿಗೆ ಸಿಂದಗಿ, ಬಸವನ ಬಾಗೇವಾಡಿ, ತಾಳಿಕೋಟೆ ತಾಲೂಕಿಗೆ ಹೈಟೆಕ್ ಗ್ರಂಥಾಲಯ ಹೊಸ ಕಟ್ಟಡ ನಿರ್ಮಾಣ ಮಾಡಿಸುವುದಾಗಿ ಭರವಸೆಯನ್ನು ನೀಡಿದ್ದಾರೆ ಸ್ವಲ್ಪ ಕಾಯಿರಿ ಎಂದು ಹೇಳಿದ್ದಾರೆ. ಅದಕ್ಕಾಗಿ ಅವರ ಮಾತಿನಂತೆ ನಾವು ಕಾದು ಕುಳತಿದ್ದೇವೆ. ಈಗಾಗಲೇ ಕಟ್ಟಡಕ್ಕೆ ಸಂಬಂಧಿಸಿದಂತೆ ಅಳತೆ ಮತ್ತು ಸಮೀಕ್ಷೆ ಮಾಡಿಕೊಂಡು ಹೋಗಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.



"ಪ್ರತಿನಿತ್ಯ ನಾನು ಓದುವುದಕ್ಕಾಗಿ ಗ್ರಂಥಾಲಯಲಕ್ಕೆ ಹೋಗುತ್ತೇನೆ. ಪ್ರತಿನಿತ್ಯ ಅಲ್ಲಿಯೇ ಕುಳಿತು ಓದುತ್ತಿದ್ದೆ. ಅದೃಷ್ಟವಶಾತ್ ಇಂದು ಅಲ್ಲಿ ಕುಳಿತುಕೊಂಡಿರಲಿಲ್ಲ. ಸ್ಪರ್ಧಾತ್ಮಕ ಪರೀಕ್ಷೆಯ ಹಿತದೃಷ್ಟಿಯಿಂದ ಇಂದಿನ ಯುವ ಜನಾಂಗಕ್ಕೆ ಉನ್ನತ ಶ್ರೇಣಿಯ ಗ್ರಂಥಾಲಯದ ಅವಶ್ಯಕತೆಯಿದ್ದು, ನೂತನ ಗ್ರಂಥಾಲಯ ಕಟ್ಟಡ ಅವಶ್ಯಕತೆ ಇದೆ. ಇನ್ನಾದರೂ ನಗರಕ್ಕೆ ಒಂದು ಸುಸಜ್ಜಿತ ಗ್ರಂಥಾಲಯ ನಿರ್ಮಾಣವಾಗಲಿ ಎಂದು ಓದುಗರ ಆಶಯ."

■ ಅನಿಲ ಎಸ್
ಓದುಗ

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR